# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 105 | TUESDAY 30-06-2026 | PRGI No : KNKAN/26/A0962 | Pages:4 | Rs.2.00 | M: 9742418836


## ಬಿಜೆಪಿಯಲ್ಲಿ ಸಡನ್ ಆಪರೇಷನ್? ವಿಜಯೇಂದ್ರ ಚೇಂಜ್: ಸದಾನಂದಗೌಡ ಆಡಿಯೋ ವೈರಲ್; ಮಾಜಿ ಸಿಎಂ ಹೇಳಿದ್ದೇನು?



ಬೆಂಗಳೂರು: ರಾಜ್ಯ ಬಿಜೆಪಿಯಲ್ಲಿ ಸಡನ್ ಆಪರೇಷನ್ನಿನ ಮಾತುಗಳು ಕೇಳಿ ಬರುತ್ತಿವೆ. ಇತ್ತೀಚೆಗೆ ನಡೆದ ವಿದಾನ ಪರಿಷತ್ ಚುನಾವಣೆಯಲ್ಲಿ ಪಕ್ಷದ ಹಲ ಶಾಸಕರು ಅಡ್ಡ ಮತದಾನ ಮಾಡಿದರಲ್ಲ? ಇದಾದ ನಂತರ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ವಿಧಾನಸಭೆಯ ಪ್ರತಿಪಕ್ಷ ನಾಯಕ ಅರ್.ಅಶೋಕ್ ಅವರ ಪಟ್ಟ ಅಲುಗಾಡುತ್ತಿದೆ.

ಇದಕ್ಕೆ ಪುಷ್ಟಿ ನೀಡುವಂತೆ ವಿಜಯೇಂದ್ರ ಅವರನ್ನು ತೆಗೆದುಹಾಕುವಂತೆ ದೆಹಲಿ ನಾಯಕರಿಗೆ ಒತ್ತಾಯ ಮಾಡಿರುವ ಮಾಜಿ ಮುಖ್ಯಮಂತ್ರಿ ಡಿವಿ ಸದಾನಂದ ಗೌಡ ಅವರದ್ದು ಎನ್ನಲಾದ ಆಡಿಯೋ ವೈರಲ್ ಆಗಿದೆ.

ಬಿಜೆಪಿ ಕೇಂದ್ರ ನಾಯಕ ಪ್ರದೀಪ್ ಎಂಬುವವರ ಜೊತೆಗೆ ಡಿವಿ ಸದಾನಂದಗೌಡ ಅವರು ಇಂಗ್ಲಿಷ್ ನಲ್ಲಿ ನಡೆಸಿದ ಸಂಭಾಷಣೆ ಇದಾಗಿದ್ದು, ಇದರಲ್ಲಿ ಮೂರು ತಿಂಗಳ ಬಳಿಕ ರಾಜ್ಯಾಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಅವರನ್ನು ಕೆಳಗಿ ಳಿಸಿ ಎಂದು ಎಂಬ ಬೇಡಿಕೆ ಇಡಲಾಗಿದೆ. ಈ ಆಡಿಯೋ ಇದೀಗ ರಾಜ್ಯ ಬಿಜೆಪಿ ಯಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿದ್ದು, ಮತ್ತೆ ಬಣ ಬಡಿದಾಟ ಶುರುವಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿವೈ ವಿಜಯೇಂದ್ರ ಅವರು ಇನ್ನು ಮೂರು ತಿಂಗಳಲ್ಲಿ ಮೂರು ವರ್ಷ ಪೂರೈಸಲಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷರ ಅವಧಿ ಮೂರು ವರ್ಷ ಇರುವುದು ಬಿಜೆಪಿಯಲ್ಲಿ ನಡೆದುಕೊಂಡು ಬಂದ ನಿಯಮವಾಗಿದೆ.

ಆಗಸ್ಟ್, ಸೆಪ್ಟೆಂಬರ್, ಅಕ್ಟೋಬರ್ ವರೆಗೂ ವಿಜಯೇಂದ್ರ ಮುಂದುವರೆಯಲು ಬಿಡಿ, ಬಳಿಕ ರಾಜ್ಯಾಧ್ಯಕ್ಷ ಸ್ಥಾನದಿಂದ ತೆಗೆದು ಹಾಕಿ ಎಂಬುವುದು ಆಡಿಯೋದಲ್ಲಿ ಉಲ್ಲೇಖವಾಗಿದೆ. ಈಗಲೇ ತೆಗೆದು ಹಾಕಿದ್ರೆ ಬಿಜೆಪಿ ಮತ್ತೆ ಲಿಂಗಾಯತ ವಿರೋಧಿ ಅಂತ ಟೀಕೆಗೆ ಗುರಿ ಆಗುವ ಅಪಾಯ ಇದೆ. ಇದು ಪಕ್ಷಕ್ಕೆ ಡ್ಯಾಮೇಜ್ ಆಗಬಹುದು. ಹಾಗಾಗಿ ಮುಂದಿನ ಅಕ್ಟೋಬರ್ ವರೆಗೂ ಕಾದು ವಿಜಯೇಂದ್ರ ಅವರನ್ನು ಪದವಿಯಿಂದ ತೆಗೆಯುವಂತೆ ಮನವಿ ಮಾಡಲಾಗಿದೆ.

### ಆಡಿಯೋ ಬಗ್ಗೆ ಮಾಜಿ ಸಿಎಂ ಹೇಳಿದ್ದೇನು?

ಇನ್ನು ಈ ಆಡಿಯೋ ಬಗ್ಗೆ ಪ್ರತಿಕ್ರಿಯಿಸಿದ ಮಾಜಿ ಸಿಎಂ ಸದಾನಂದಗೌಡ ಅವರು, ಆಡಿಯೋ ಕುರಿತು ನಾನು ಯಾವುದೇ ಕಾಮೆಂಟ್‌ಗಳನ್ನು ಮಾಡುವುದಿಲ್ಲ ಎಂದು ಹೇಳಿದ್ದಾರೆ.

"ಆಡಿಯೋ ಬಗ್ಗೆ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ನನ್ನದಲ್ಲದ ಆಡಿಯೋ ಮತ್ತು ವಿಡಿಯೋಗೆ ನಾನು ಉತ್ತರಿಸುವುದಿಲ್ಲ" ಎಂದು ಅವರು ಸುದ್ದಿಗಾರರಿಗೆ ತಿಳಿಸಿದ್ದಾರೆ.

ಈ ಆಡಿಯೋ ಬಗ್ಗೆ ನನಗೆ ಗೊತ್ತಿಲ್ಲ, ಹಾಗಾಗಿ ಉತ್ತರ ಕೊಡುವುದಿಲ್ಲ. ಆಡಿಯೋ ಬಗ್ಗೆ ಸತ್ಯ ಸಂಗತಿ ಹೊರಬರಲಿ. ನನ್ನ ಬಗ್ಗೆ ಬಹಳ ದಿನದಿಂದ ಚರ್ಚೆ ಆಗುತ್ತಿತ್ತು. ಕೋರ್ ಕಮಿಟಿ ಸಭೆಯಲ್ಲಿ ಕೆಲವು ಮಾತುಗಳನ್ನು ಹೇಳಿದ್ದೇನೆ. ಕೇಂದ್ರ ನಾಯಕರು, ರಾಜ್ಯ ನಾಯಕರು ಕೇಳಿದ್ರೆ ಉತ್ತರ ಕೊಡುತ್ತೇನೆ ಎಂದು ಸ್ಪಷ್ಟಪಡಿಸಿದ್ದಾರೆ.

## 'ದಲಿತರನ್ನು ಅಧಿಕಾರಕ್ಕೆ ಬಳಸಿಕೊಂಡು ಬಳಿಕ ಮೂಲೆಗುಂಪು ಮಾಡೋದು ನಿಮ್ಮ ಸಂಸ್ಕೃತಿ': ಕಾಂಗ್ರೆಸ್ ವಿರುದ್ಧ BJP ವಾಗ್ದಾಳಿ



ಬೆಂಗಳೂರು: ದಲಿತರು, ಶೂದ್ರರು ಹಾಗೂ ಶೋಷಿತರ ಧ್ವನಿಯಾಗಿದ್ದ ಬಾಬಾಸಾಹೇಬ್ ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ ಸೋಲಿಸಿ, ಅವರು ಸಂಸತ್ತಿಗೆ ಬರದಂತೆ ತಡೆದ ಕರಾಳ ಇತಿಹಾಸ ಇರುವುದು ನಿಮ್ಮದೇ ಕಾಂಗ್ರೆಸ್ ಪಕ್ಷಕ್ಕೆ ಅಲ್ಲವೇ? ಎಂದು ರಾಜ್ಯ ಬಿಜೆಪಿ ಪ್ರಶ್ನೆ ಮಾಡಿದ್ದು, ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದೆ.

ಈ ಕುರಿತು ಪಕ್ಷದ ಅಧಿಕೃತ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ, ಅಹಿಂದ ಚಾಂಪಿಯನ್ ಎಂದು ತಮ್ಮ ಬೆನ್ನು ತಾವೇ ತಟ್ಟಿಕೊಳ್ಳುವ ಸಿದ್ದರಾಮಯ್ಯ ಅವರೇ, ದಲಿತರು, ಶೂದ್ರರು ಹಾಗೂ ಶೋಷಿತರ ಧ್ವನಿಯಾಗಿದ್ದ ಬಾಬಾಸಾಹೇಬ್ ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ ಸೋಲಿಸಿ, ಅವರು ಸಂಸತ್ತಿಗೆ ಬರದಂತೆ ತಡೆದ ಕರಾಳ ಇತಿಹಾಸ ಇರುವುದು ನಿಮ್ಮದೇ ಕಾಂಗ್ರೆಸ್ ಪಕ್ಷಕ್ಕೆ ಅಲ್ಲವೇ? ಎಂದು ಪ್ರಶ್ನಿಸಿದೆ.

ಅಂಬೇಡ್ಕರ್ ಅವರಿಗೆ ಭಾರತ ರತ್ನ ನೀಡಲು ದಶಕಗಳ ಕಾಲ ಸತಾಯಿಸಿದ ನಿಮ್ಮ ಪಕ್ಷದ ಇತಿಹಾಸ ನಿಮಗೆ ನೆನಪಿಲ್ಲವೇ? ಮರೆತುಹೋಗಿದ್ದರೆ, ನಿಮ್ಮದೇ ಪಕ್ಷದ ನಾಯಕ ರಮೇಶ್ ಕುಮಾರ್ ಅವರು ಅಂದು ಸದನದಲ್ಲೇ ನಿಂತು 'ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ ಸೋಲಿಸಿ ಕಾಂಗ್ರೆಸ್ ಮಹಾ ದ್ರೋಹ ಮಾಡಿತು' ಎಂದು ಬಿಚ್ಚಿಟ್ಟ ಕಟು ಸತ್ಯದ ಮಾತುಗಳನ್ನು ಒಮ್ಮೆ ಆತ್ಮಾವಲೋಕನ ಮಾಡಿಕೊಳ್ಳಿ.

ಅಂದು ಬಾಬಾಸಾಹೇಬರ ಹಕ್ಕುಗಳನ್ನು ತುಳಿದು ಅನ್ಯಾಯ ಮಾಡಿದವರ ಮಡಿಲಲ್ಲೇ ಆಶ್ರಯ ಪಡೆದ ನೀವೆಲ್ಲಾ ಇಂದು ಸಾಮಾಜಿಕ ನ್ಯಾಯದ ಸೋಗು ಹಾಕುತ್ತಿರುವುದು ವಿಪರ್ಯಾಸ ಎಂದು ಟೀಕಿಸಿದೆ.

ದಶಕಗಳ ಕಾಲ ದೇಶವನ್ನಾಳಿದ ಕಾಂಗ್ರೆಸ್ ಪಕ್ಷ ಹಿಂದುಳಿದ ವರ್ಗಗಳ ಹೆಸರಲ್ಲಿ ರಾಜಕೀಯ ಮಾಡಿಕೊಂಡು ಅಧಿಕಾರದ ಚುಕ್ಕಾಣಿ ಹಿಡಿಯಿತೇ ಹೊರತು, ಶೋಷಿತ ಸಮುದಾಯಗಳ ಏಳಿಗೆಗೆ ಪ್ರಾಮಾಣಿಕ ಪ್ರಯತ್ನ ಮಾಡಲಿಲ್ಲ. ವೋಟ್ ಬ್ಯಾಂಕ್ ರಾಜಕೀಯಕ್ಕಾಗಿ ಹಿಂದುಳಿದವರನ್ನು ಕೇವಲ ಮತಪೆಟ್ಟಿಗೆ ಯಾಗಿ ಬಳಸಿಕೊಳ್ಳುತ್ತಿದೆ ಅಷ್ಟೆ. ಕಾಂಗ್ರೆಸ್ಸಿನ ಇಂತಹ ಸರ್ವಾಧಿಕಾರಿ ಸಂಸ್ಕೃತಿಗೆ ನೀವು ಗುಲಾಮರಾಗಿದ್ದೀರಿಯೇ ಹೊರತು, ರಾಷ್ಟ್ರೀಯತೆಯ ಉಳಿವಿಗೆ ಶ್ರಮಿಸುತ್ತಿರುವ ಬಿಜೆಪಿ ಪಕ್ಷವಲ್ಲ.

ಅಧಿಕಾರದಿಂದ ಕೆಳಗಿಳಿಯುತ್ತಿದ್ದಂತೆಯೇ ನಿಮ್ಮನ್ನು ಕಾಂಗ್ರೆಸ್ ಪಕ್ಷ ಸಂಪೂರ್ಣವಾಗಿ ಮೂಲೆಗುಂಪು ಮಾಡಿದೆ. ಕನಿಷ್ಠ ಪಕ್ಷ ಪಕ್ಷದ ವೇದಿಕೆಗಳಲ್ಲಾಗಲಿ, ಪೋಸ್ಟರ್‌ಗಳಲ್ಲಾಗಲಿ ಭಾವಚಿತ್ರವನ್ನೂ ಬಳಸದಷ್ಟು ನಿಮ್ಮನ್ನು ಕಡೆಗಣಿಸಲಾಗುತ್ತಿದೆ. ಮತ್ತೊಂದೆಡೆ, ಹಿರಿಯ ದಲಿತ ನಾಯಕರಾದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರ ಭಾವಚಿತ್ರವನ್ನು ಸರ್ಕಾರದ ಅಧಿಕೃತ ಜಾಹಿರಾತುಗಳಲ್ಲೇ ವ್ಯವಸ್ಥಿತವಾಗಿ ಕೈಬಿಡಲಾಗುತ್ತಿದೆ. ಹಿಂದುಳಿದ ಮತ್ತು ದಲಿತ ಸಮುದಾಯದ ನಾಯಕರನ್ನು ಕೇವಲ ಅಧಿಕಾರ ಹಿಡಿಯಲು ದಾಳವಾಗಿ ಬಳಸಿ, ನಂತರ ಮೂಲೆಗುಂಪು ಮಾಡುವುದು ಕಾಂಗ್ರೆಸ್‌ನ ರಕ್ತದಲ್ಲೇ ಬಂದಿದೆ ಎಂದು ವಾಗ್ದಾಳಿ ನಡೆಸಿದೆ.

## ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಿಬ್ಬಂದಿಗಳ ಕೊರತೆ; ಕೂಡಲೇ ಅಗತ್ಯವಿರುವ ಸಿಬ್ಬಂದಿಗಳನ್ನು ಭರ್ತಿ ಮಾಡುವಂತೆ ಗ್ರಾಮಸ್ಥರು ಆಯುಕ್ತರಿಗೆ ಮನವಿ



ಗೋಕಾಕ: ಆರೋಗ್ಯ ಇಲಾಖೆಯ ಉಪನಿರ್ದೇಶಕ ಡಾ. ರಾಧಾಕೃಷ್ಣ ಅವರು ಮನವಿ ಸಲ್ಲಿಸುತ್ತಿರುವದು.

**ಬೆಳಗಾವಿ ವಾರ್ತೆ ಗೋಕಾಕ:** ಸುಮಾರು 13 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಿಬ್ಬಂದಿಗಳ ಕೊರತೆಯನ್ನು ಎದುರಿಸುತ್ತಿದ್ದು, ಕೂಡಲೇ ಅಗತ್ಯವಿರುವ ಸಿಬ್ಬಂದಿಗಳನ್ನು ಭರ್ತಿ ಮಾಡುವಂತೆ ಗ್ರಾಮಸ್ಥರು ಆಯುಕ್ತರಿಗೆ ಮನವಿ ಮಾಡಿಕೊಂಡಿದ್ದಾರೆ.

ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಕೌಜಲಗಿ ಮತ್ತು ಸುತ್ತಮುತ್ತಲಿನ ಪ್ರದೇಶಗಳ ನಾಗರೀಕರಿಗೆ ಅಗತ್ಯವಿರುವ ಆರೋಗ್ಯ ಸೇವೆಗಳು ಸಿಗಬೇಕೆನ್ನುವ ಉದ್ದೇಶದಿಂದ ಅಂದಾಜು 13 ಕೋಟಿ ರೂಪಾಯಿ ವೆಚ್ಚದಲ್ಲಿ ಕೌಜಲಗಿಯಲ್ಲಿ ಸಮುದಾಯ ಆರೋಗ್ಯ ಕೇಂದ್ರದ ನಿರ್ಮಾಣಕ್ಕೆ ಕಾರಣೀಕರ್ತರಾಗಿದ್ದಾರೆ. ಈ ಸುಸಜ್ಜಿತ ಕಟ್ಟಡದ ಉದ್ಘಾಟನೆಯು ನಡೆದಿದೆ. ನಾಗರೀಕರ ಅನುಕೂಲಕ್ಕಾಗಿ ಭವ್ಯವಾದ ಕಟ್ಟಡವು ತಲೆ ಎತ್ತಿದ್ದರೂ ಆರೋಗ್ಯ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ನಾಗರೀಕರಿಗೆ ಸಿಗಬೇಕಿರುವ ಸೌಲಭ್ಯಗಳು ಇನ್ನೂ ಮರಚಿಕೆಯಾಗಿವೆ. ಸಿಬ್ಬಂದಿಗಳ ನೇಮಕಕ್ಕೆ ಸ್ವತಃ ಶಾಸಕರೇ ಆರೋಗ್ಯ ಇಲಾಖೆಯ ಮೇಲಾಧಿಕಾರಿಗಳಿಗೆ ಸಾಕಷ್ಟು ಸಲ ಸೂಚಿಸಿದ್ದರೂ ಇದುವರೆಗೂ ಇಲಾಖೆಯ ಅಧಿಕಾರಿಗಳು ಮಾತ್ರ ಅಮಾವಾಸ್ಯೆ ಕತ್ತಲಲ್ಲಿದ್ದಾರೆ. ಅಧಿಕಾರಿಗಳ ದಿವ್ಯ ಮೌನದಿಂದಾಗಿ ಭರ್ತಿಯಾಗಬೇಕಿರುವ ಹಲವು ಹುದ್ದೆಗಳು ಕಾರ್ಮೋಡಕ್ಕೆ ಸಿಲುಕಿಕೊಂಡಿವೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಸ್ತ್ರೀ ರೋಗ ತಜ್ಞರು, ಚಿಕ್ಕ ಮಕ್ಕಳ ತಜ್ಞರು, ಅರವಳಿಕೆ ತಜ್ಞರು, ಸರ್ಜನ್, ಸ್ಟಾಫ್ ನರ್ಸ್, ಲ್ಯಾಬ್ ಟೆಕ್ನಿಷಿಯನ್, ಎಫ್ಡಿಸಿ, ಎಕ್ಸರೇ ವಿಭಾಗ, ಸುಮಾರು ಹತ್ತು ಜನ ಡಿ ನೌಕರರ ಸ್ಥಾನಗಳು ಖಾಲಿಯಿವೆ. ಇದರಿಂದ ನಾಗರೀಕರಿಗೆ ಯಾವೊಂದು ಸೌಲಭ್ಯಗಳು ಸಿಗುತ್ತಿಲ್ಲ. ಕೌಜಲಗಿ ಬಿಟ್ಟು ತಾಲ್ಲೂಕು ಕೇಂದ್ರಕ್ಕೆ ಹೋಗಬೇಕಾದ ಅನೀವಾರ್ಯತೆ ಎದುರಾಗಿದೆ. ಯಾವ ಮೂಲಭೂತ ಸೌಕರ್ಯಗಳು ಸಹ ಈ ಕೇಂದ್ರದಲ್ಲಿ ಸಿಗುತ್ತಿಲ್ಲ. ರೋಗಿಗಳ ಹಿತದೃಷ್ಟಿಯಿಂದ ಕೂಡಲೇ ಖಾಲಿಯಿರುವ ಸ್ಥಾನಗಳಿಗೆ ಭರ್ತಿ ಮಾಡುವಂತೆ ಇಲ್ಲಿನ ನಾಗರೀಕರು ಚಿಕ್ಕೋಡಿ ಉಪ– ವಿಭಾಗದ ಉಸ್ತುವಾರಿ ಅಧಿಕಾರಿಗಳ ಮೂಲಕ ಆಯುಕ್ತರಿಗೆ ಮನವಿ ಮಾಡಿಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಪ್ರಮುಖರಾದ ಪರಮೇಶ್ವರ ಹೊಸಮನಿ, ರಾಯಪ್ಪ ಬಳೋಲದಾರ, ನೀಲಪ್ಪ ಕೇವಟಿ, ಅಶೋಕ ಹೊಸಮನಿ, ಮಂಜುನಾಥ ಸಣ್ಣಕ್ಕಿ, ರಾಮಪ್ಪ ಈಟಿ, ಹಾಸೀಮಸಾಬ ನಗಾರ್ಚಿ, ಅಕ್ಬರ ಮುಲ್ತಾನಿ, ಶಂಕರ ಜೋತಿನವರ, ಅಶೋಕ ಶಿವಾಪೂರ, ನೌಕರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಆನಂದ ಹಣಜಿ, ಗ್ರಾಮಪಂಚಾಯತಿ ಪಿಡಿಓ ಪಾಟೀಲ(ಪ್ರ), ಆಯುಷ್ ವೈದ್ಯ ಡಾ. ಪ್ರಶಾಂತ ಸಣ್ಣಕ್ಕಿ, ಮುಂತಾದವರು ಉಪಸ್ಥಿತರಿದ್ದರು.

ಆರೋಗ್ಯ ಇಲಾಖೆಯ ಉಪನಿರ್ದೇಶಕ ಡಾ. ರಾಧಾಕೃಷ್ಣ ಅವರು ಮನವಿ ಸ್ವೀಕರಿಸಿ ಆಯುಕ್ತರಿಗೆ ವರದಿ ಒಪ್ಪಿಸುವುದಾಗಿ ಗ್ರಾಮಸ್ಥರಿಗೆ ಭರವಸೆ ನೀಡಿದರು.

## ಪೋಲಿಯೋ ನಿರ್ಮೂಲನೆ ಕಾರ್ಯಕ್ರಮಕ್ಕೆ ಚಾಲನೆ



**ಬೆಳಗಾವಿ ವಾರ್ತೆ ಉಗರಗೋಳ :** ಅಂಗವಿಕಲತೆ ಸೇರಿದಂತೆ ಹಲವು ಸಂಕ್ರಾಮಿಕ ರೋಗಗಳು ಬಹು ಬೇಗ ಮಕ್ಕಳಲ್ಲಿ ಹರಡುತ್ತಿದ್ದು, ಮುನ್ನಚ್ಚರಿಕೆ ಕ್ರಮವಾಗಿ ಜನರು ಮಕ್ಕಳ ಆರೋಗ್ಯದ ಬಗೆಗೆ ಕಾಳಜಿ ವಹಿಸುವದು ಸೂಕ್ತ. ಎಂದು ಮಂಜುನಾಥ ಅಂಗಡಿ ಹೇಳಿದರು.

ಶ್ರೀಕ್ಷೇತ್ರ ಶ್ರೀಯಲ್ಲಮ್ಮನ ಗುಡ್ಡದಲ್ಲಿ ಪೋಲಿಯೋ ನಿರ್ಮೂಲನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ರಾಷ್ಟ್ರೀಯ ಪಲ್ಸ್‌ಪೋಲಿಯೋ ನಿರ್ಮೂಲನೆಯ ನಿಟ್ಟಿನಲ್ಲಿ ಎಲ್ಲ 5 ವರ್ಷದೊಳಗಿನ ಮಕ್ಕಳಿಗೆ 2 ಹನಿ ಪಲ್ಸ್‌ಪೋಲಿಯೋ ಲಸಿಕೆಯನ್ನು ಕಡ್ಡಾಯವಾಗಿ ಹಾಕಿಸಿ. ಯಾವುದೇ ಮಗು ಲಸಿಕೆಯಿಂದ ವಂಚಿತವಾಗಬಾರದು ಎಂದು ಕರೆ ನೀಡಿದರು.

ಪ್ರಭು ಹಂಜಗಿ, ಆಯ್ ಸಿ ಕಗದಾಳ, ಎಮ್ ಜಿ ಪವಾರ, ಬಸವರಾಜ, ಆನಂದ, ವರುಣ ಅರಗಂಜಿ, ಮಹೇಶ ಸೋಮನಟ್ಟಿ, ಅಕ್ಕಮ್ಮಾ ಮಾದರ, ಗದಿಗೆಪ್ಪ ಕಂಕನವಾಡಿ, ಉಣಕಲ್ಲದ ಶಿದ್ದಪ್ಪ ಸಣ್ಣತಂಗಿ, ರಘು ಓಲೇಕಾರ, ಪರಶುರಾಮ ಸಣ್ಣತಂಗಿ, ವನಜಾಕ್ಷೀ ಓಲೇಕಾರ, ಯಲ್ಲಪ್ಪ ಹಿರೇಕುಂಬಿ, ಸವದತ್ತಿ ಆರೋಗ್ಯೆ ಕೇಂದ್ರದ ಸಿಬ್ಬಂದಿ ಹಾಗೂ ದೇವಸ್ಥಾನ ಸಿಬ್ಬಂದಿ ಇದ್ದರು.

## ಇಂದಿನಿಂದ ಬೂತ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ



ಗೋಕಾಕ: ಪತ್ರಿಕಾಗೋಷ್ಠಿಯಲ್ಲಿ ತಹಶೀಲದಾರ ಡಾ.ಮೋಹನ ಭಸ್ಮೆ ಹಾಗೂ ಪೌರಾಯುಕ್ತ ರವಿ ರಂಗಸುಭೆ ಮಾತನಾಡುತ್ತಿರುವದು.

**ಬೆಳಗಾವಿ ವಾರ್ತೆ ಗೋಕಾಕ:** ಗೋಕಾಕ ತಾಲೂಕಿನಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಎಸ್‌ಐಆರ್ ಕಾರ್ಯ ದಿ.30ರಿಂದ ಒಂದು ತಿಂಗಳ ವರೆಗೆ ನಡೆಯಲಿದ್ದು ಪ್ರತಿ ಮನೆಮನೆಗೆ ಭೇಟಿ ನೀಡಿ ಪರಿಷ್ಕರಣೆಯನ್ನು ಬಿಎಲ್‌ಓಗಳು ಮಾಡುತ್ತಿದ್ದು ಜನತೆ ಅವರಿಗೆ ಸಹಕಾರ ನೀಡುವಂತೆ ತಹಶೀಲದಾರ ಡಾ.ಮೋಹನ ಭಸ್ಮೆ ಹಾಗೂ ಪೌರಾಯುಕ್ತ ರವಿ ರಂಗಸುಭೆ ಹೇಳಿದರು.

ಅವರು, ಸೋಮವಾರದಂದು ನಗರದ ತಹಶೀಲದಾರ ಕಾರ್ಯಾಲಯದಲ್ಲಿ ಕರೇದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತ ಎಲ್ಲ ಅರ್ಹ ಮತದಾರರಿಗೆ ಮತದಾನ ಹಕ್ಕು ನೀಡುವ ಉದ್ದೇಶದಿಂದ ಚುನಾವಣಾ ಆಯೋಗ ಮತದಾರರ ಪಟ್ಟಿ ಪರಿಷ್ಕರಣೆ ಎಸ್‌ಐಆರ್ ನಡೆಸುತ್ತಿದ್ದು ತಮ್ಮ ಮನೆಗಲಿಗೆ ಪರಿಷ್ಕರಣೆಗೆ ಬರುವವರಿಗೆ ಸರಿಯಾದ ಮಾಹಿತಿಯನ್ನು ನೀಡಿ, ಗೊಂದಲಗಳಿಗೆ ಒಳಗಾಗದೆ ಅವರು ಕೇಳುವ ದಾಖಲೆಗಳೊಂದಿಗೆ ಪಾಸ್‌ಪೋರ್ಟ ಸೈಜ್ ಪೋಟೊ(ಭಾವಚಿತ್ರ) ನೀಡಬೇಕು. ಪ್ರತಿ ಮನೆಗೆ ಮೂರು ಬಾರಿ ಭೇಟಿ ನೀಡಿ ಯಾರು ಈ ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಈ ಕಾರ್ಯವನ್ನು ಮಾಡಲಾಗುತ್ತಿದೆ. ತಾಲೂಕಿನಲ್ಲಿ 2.60ಲಕ್ಷ ಮತದಾರರಿದ್ದು 290 ಮತಗಟ್ಟೆಗಳಲ್ಲಿ ಮತದಾರರ ಸೌಲಭ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಇಲ್ಲಿಗೆ ಬರುವ ಸಾರ್ವಜನಿಕರಿಗೆ ಬಿಎಲ್‌ಓಗಳು ಸೂಕ್ತ ಮಾಹಿತಿ ನೀಡಿ ಸಹಕರಿಸಲಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಚುನಾವಣಾ ಇಲಾಖೆಯ ಪ್ರವೀಣ ಮಾಳಾಜ ಇದ್ದರು.

## ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ



**ಬೆಳಗಾವಿ ವಾರ್ತೆ ಉಗರಗೋಳ:** ಸವದತ್ತಿ ತಾಲೂಕಿನ ಚಿಕ್ಕುಂಬಿ ಗ್ರಾಮದ ಉಪ ಆರೋಗ್ಯ ಕೇಂದ್ರದಲ್ಲಿ ಹಿರೇಕುಂಬಿಯ ಡಾ,ಕೆ ಬಿ ಹನಶಿ ಮಕ್ಕಳಿಗೆ 2 ಹನಿ ಪೋಲಿಯೋ ಲಸಿಕೆ ಹಾಕುವುದರ ಮೂಲಕ ಚಾಲನೆ ನೀಡಿದರು

ಚಿಕ್ಕುಂಬಿಯ ಎಚ್ ಎಮ್ ಅವಟೆ, ವಿನೋದ ಲಮಾಣಿ, ಯಲ್ಲಪ್ಪ ಗೊಲ್ಲರ, ಶೋಭಾ ಸಂಗನಗೌಡರ್, ಮಮ್ಮದಲಿ ದೊಡಮನಿ, ಕಲಾವತಿ ಕುಂಭಾರ, ಮಲ್ಲಪ್ಪ ಬಡಿಗೇರ, ಗಂಗಮ್ಮ ಮಾದರ, ಕಲ್ಲವ್ವ ಹತ್ತಿಕಟಗಿ, ಶಾಂತವ್ವಾ ಬಾರ್ಕಿ, ಗೌರವ್ವ ಹುಡೇದ, ಫರೀಜಾನ ನಧಾಪ್ ಹಾಗೂ ಆಶಾ ಕಾರ್ಯಕರ್ತೆಯರು, ಆರೋಗ್ಯ ಕೇಂದ್ರದ ಸಿಬ್ಬಂದಿ ಇದ್ದರು.

# ಭಕ್ತಿ, ಸೌಹಾರ್ದ, ಸಂಭ್ರಮದ ನಡುವೆ ಚವನಭಾವಿಯಲ್ಲಿ ಮೊಹರಂ ಆಚರಣೆ

## ಅಲಾಯಿ ದೇವರು, ಡೋಲಿ ದೇವರ ಭವ್ಯ ಮೆರವಣಿಗೆ । ಹಿಂದು–ಮುಸ್ಲಿಂ ಬಾಂಧವರಿಂದ ಶ್ರದ್ಧಾಭಕ್ತಿಯ ಆಚರಣೆ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲ್ಲೂಕಿನ ಚವನಭಾವಿ ಗ್ರಾಮದಲ್ಲಿ ಹಿಂದು–ಮುಸ್ಲಿಂ ಭಾವೈಕ್ಯತೆಯ ಪ್ರತೀಕವಾಗಿರುವ ಮೊಹರಂ ಹಬ್ಬವನ್ನು ಶನಿವಾರ ಶ್ರದ್ಧಾ–ಭಕ್ತಿಯಿಂದ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಹಬ್ಬದ ಅಂಗವಾಗಿ ಪ್ರತಿಷ್ಠಾಪಿಸಲಾಗಿದ್ದ ಅಲಾಯಿ ದೇವರು ಹಾಗೂ ಡೋಲಿ ದೇವರ ಭವ್ಯ ಮೆರವಣಿಗೆ ಗ್ರಾಮದ ಪ್ರಮುಖ ಬೀದಿ ಗಳಲ್ಲಿ ಸಾಗಿದ್ದು, ಕೊನೆಗೆ ಸಂಪ್ರದಾಯ ಬದ್ಧವಾಗಿ ವಿಸರ್ಜನಾ( ಸಮಾಪ್ತಿ) ವಿಧಿವಿಧಾನಗಳು ನೆರವೇರಿದವು.



ಹಲಗಿ ನಾದ, ಜಯಘೋಷ ಹಾಗೂ ಧಾರ್ಮಿಕ ಸಂಭ್ರಮದ ನಡುವೆ ಅಲಾಯಿ ಮತ್ತು ಡೋಲಿ ದೇವರ ಮೆರವಣಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿತು. ಮೆರವಣಿಗೆಯಲ್ಲಿ ಹಿಂದು–ಮುಸ್ಲಿಂ ಬಾಂಧವರು ಭುಜಕ್ಕೆ ಭುಜ ಸೇರಿಸಿ ಹೆಜ್ಜೆ ಹಾಕಿ ಕುಣಿದು ಭಾವೈಕ್ಯತೆಯ ಸಂದೇಶ ಸಾರಿದರು. ಮಹಿಳೆಯರು, ಯುವಕರು, ಮಕ್ಕಳು ಹಾಗೂ ಹಿರಿಯರು ಅಪಾರ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದರು. ಅಲಾಯಿ ದೇವರ ಮುಂದೆ ಭಕ್ತರು ಉತ್ತತ್ತಿ ಹಾಗೂ ಚುರಮುರಿ ತುರುವ ಮೂಲಕ ತಮ್ಮ ಭಕ್ತಿ ಸಮರ್ಪಿಸಿದರು.

ಮೆರವಣಿಗೆಯು ಗ್ರಾಮದ ಮಸೂತಿಯಿಂದ ಪ್ರಾರಂಭವಾಗಿ ಶ್ರೀ ಯಮನೂಪ್ಪ ಗುಡಿಯಿಂದ ಆರಂಭವಾಗಿ ಶ್ರೀ ಗದ್ದೆಮ್ಮ ದೇವಿ ದೇವಸ್ಥಾನ ಹಾಗೂ ಶ್ರೀ ಆಂಜನೇಯ ದೇವಸ್ಥಾನಕ್ಕೆ ತೆರಳಿ, ದೇವರ ಅಪ್ಪಸಾಬ ದೇವರ ಆಶೀರ್ವಾದ ಪಡೆದು ಸಮಾಗಮಗೊಂಡಿತು.

ನಂತರ ಗ್ರಾಮದ ಅಪ್ಪಸಾಬ ದೇವರ ಆರ್ಶಿವಾದಗಳನ್ನು ಮುಗಿಸಿ ಊರಿನ ದೈವದ ಬಾವಿಯಲ್ಲಿ ಗಂಗಸ್ಥಳ ಮುಗಿಸಿ ಅಲಾಯಿ ಹಾಗೂ ಡೋಲಿ ದೇವರ ವಿಸರ್ಜನಾ( ಸಮಾಪ್ತಿ) ಕಾರ್ಯ ಧಾರ್ಮಿಕ ವಿಧಿವಿಧಾನಗಳೊಂದಿಗೆ ನೆರವೇರಿತು.

ಅಲಾಯಿ ದೇವರನ್ನು ಹಿಡಿಯುವವರಾಗಿ ಕಾಶಪ್ಪ ಈಳಗೇರ, ಲಕ್ಷ್ಮಣ ಈಳಗೇರ ಹಾಗೂ ಮುದಕಪ್ಪ ಈಳಗೇರ ಸೇವೆ ಸಲ್ಲಿಸಿದರು. ಪೂಜಾರಿಗಳಾದ ದೌಲಸಾಬ ಮುಜಾವಾರ ಹಾಗೂ ಹಲಳ್ಳಿ ಬುಕ್ ಯಮನೂರಿ ನಾಯ್ಕೋಡಿ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು.

ಮೆರವಣಿಗೆಯಲ್ಲಿ ಚವನಭಾವಿ ಗ್ರಾಮದ ಸಮಸ್ತ ದೈವ ಮಂಡಳಿ, ಹಿಂದು–ಮುಸ್ಲಿಂ ಬಾಂಧವರು, ಮಹಿಳೆಯರು, ಯುವಕರು, ಮಕ್ಕಳು, ನಾಗರಿಕರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡು ಮೊಹರಂ ಹಬ್ಬವನ್ನು ಭಕ್ತಿ, ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸಿದರು.

# ಶೋಷಿತರ ನೋವುಗಳಿಗೆ ಲೇಖನಿಯ ಮೂಲಕ ದನಿಯಾಗಿದ್ದ ಸಿದ್ದಲಿಂಗಯ್ಯ

**ಬೆಳಗಾವಿ ವಾರ್ತೆ ವಿಜಯಪುರ:** ಟಿ. ಸಿದ್ದಲಿಂಗಯ್ಯ ಕನ್ನಡ ಸಾರಸ್ವತ ಲೋಕದ ದಿಗ್ಗಜರು, ದಲಿತ ಚಳವಳಿಯ ಪ್ರಮುಖ ರೂವಾರಿ ಹಾಗೂ ‘ಹೊಲೆಮಾದಿಗರ ಹಾಡು’, ‘ಊರು ಕೇರಿ’ ಮುಂತಾದ ಮರೆಯಲಾಗದ ಕೃತಿಗಳನ್ನು ನೀಡಿದ ಜನಪರ ಕವಿ ಡಾ. ಸಿದ್ಧಲಿಂಗಯ್ಯನವರು ಕನ್ನಡ ಸಾಹಿತ್ಯಕ್ಕೆ ನೀಡಿರುವ ಕೊಡುಗೆ ಅನನ್ಯವಾದದ್ದು ಎಂದು ಸಿಕ್ಯಾಬ್ ಪದವಿ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ. ಮಲ್ಲಿಕಾರ್ಜುನ ಮೇತ್ರಿ ಅಭಿಪ್ರಾಯಪಟ್ಟರು.



ಮೂರು ದಶಕಗಳಿಗೂ ಹೆಚ್ಚು ಕಾಲ ಕನ್ನಡ ಕಾವ್ಯ, ನಾಟಕ, ವಿಮರ್ಶೆ ಹಾಗೂ ಆತ್ಮಕಥನ ಪ್ರಕಾರಗಳಲ್ಲಿ ಸಾಹಿತ್ಯ ರಚನೆ ಮಾಡಿರುವ ಅವರು, ಶೋಷಿತರ ನೋವುಗಳಿಗೆ ತಮ್ಮ ಲೇಖನಿಯ ಮೂಲಕ ದನಿಯಾಗಿದ್ದರು. ಅವರ ಕವಿತೆಗಳು ಬಂಡಾಯ ಸಾಹಿತ್ಯದ ಪ್ರಮುಖ ಮೈಲಿಗಲ್ಲುಗಳಾಗಿ ನಿಲ್ಲುತ್ತವೆ ಎಂಬುದನ್ನು ಅನೇಕ ನಿದರ್ಶನಗಳ ಮೂಲಕ ಎಳೆಎಳೆಯಾಗಿ ಬಿಚ್ಚಿಟ್ಟರು.

ರವಿವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತಾಲೂಕ ಸಾಹಿತ್ಯ ಸಮ್ಮೇಳನ ಹಿಟ್ಟನಹಳ್ಳಿ ಸಹಯೋಗದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಜರುಗಿದ “ಡಾ.ಸಿದ್ಧಲಿಂಗಯ್ಯ ಕವಿಗಳ ಕುರಿತು ಹಮ್ಮಿಕೊಂಡ ವಿಶೇಷ ಚಿಂತನಾ ಗೋಷ್ಠಿ” ಉದ್ಘಾಟಿಸಿ ಮಾತನಾಡಿದ ಅವರು, ಸಿದ್ಧಲಿಂಗಯ್ಯನವರು ಒಂದು ಸಮುದಾಯದ ಧ್ವನಿಯಾಗಿ ಹೊರಹೊಮ್ಮಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಗೌರವ ಕೋಶಾಧ್ಯಕ್ಷ ಅಭಿಷೇಕ ಚಕ್ರವರ್ತಿ ಮಾತನಾಡಿ, ನೊಂದವರನ್ನೆ ತಮ್ಮ ಕಾವ್ಯದ ಧ್ವನಿಯಾಗಿ ಬಳಸಿಕೊಂಡು, ಜನರ ನೋವನ್ನು ಅಕ್ಷರ ರೂಪದಲ್ಲಿ ಹೊರಹಾಕುವ ಕಾವ್ಯಗಳನ್ನು ರಚಿಸುವ ಮೂಲಕ ಡಾ.ಸಿದ್ಧಲಿಂಗಯ್ಯನವರು ಓರ್ವ ಸಂವೇದನಾಶೀಲ ಕವಿಯಾಗಿದ್ದರು. ಇಂದು ಅವರ ಕುರಿತು ಪರಿಷತ್ತಿನಲ್ಲಿ ಚಿಂತನಾಗೋಷ್ಠಿ ಏರ್ಪಡಿಸಿರುವುದು ಸಂತೋಷದ ಸಂಗತಿ ಎಂದರು.

“ಡಾ.ಸಿದ್ಧಲಿಂಗಯ್ಯನವರ ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಶಿಕ್ಷಕಿ ಸಾಹಿತಿ ಶರಣಮ್ಮ ಹಾದಿಮನಿ ಮಾತನಾಡಿ, ಸದಾ ಶೋಷಿತರ ಪರವಾಗಿ ಮಿಡಿಯುತ್ತಿದ್ದ ಮನಸ್ಸು ಸಿದ್ದಲಿಂಗಯ್ಯ ಅವರದಾಗಿತ್ತು. ಶಿಷ್ಟ ಕಾವ್ಯ ಪರಂಪರೆಯನ್ನು ಮುರಿದು ತಮ್ಮದೇ ಆದ ದಿಟ್ಟ, ನೇರವಾದ ಭಾಷೆಯಿಂದ ಬಂಡಾಯದ ಕವಿತೆಗಳನ್ನು ಬರೆದು, ಸದಾ ಶೋಷಿತರ ಪರವಾಗಿ ಮಿಡಿಯುತ್ತಿದ್ದ ಮನಸ್ಸು ಸಿದ್ದಲಿಂಗಯ್ಯ ಅವರದಾಗಿತ್ತು ಎಂದರು.

ಕಾರ್ಯಕ್ರಮದ ವೇದಿಕೆಯಲ್ಲಿ ಮುಖ್ಯ ಅತಿಥಿಗಳಾಗಿ ಬಸವರಾಜ ಸೋಮಪುರ, ಶರಣಗೌಡ ಪಾಟೀಲ, ಶಶಿಕಲಾ ಗುರುಸ್ಥಾವರಮಠ, ಪರವೀನಬಾನು ಶೇಖ, ಶಿವಾಜಿ ಮೋರೆ ಮುಂತಾದವರು ಮಾತನಾಡಿದರು.

# ಬೈಕ್ ಸೈಡ್ ಬ್ಯಾಗ್‌ನಲ್ಲಿ ಮಗು ಕೂರಿಸಿ ಪ್ರಯಾಣ: ವೈರಲ್ Video ನೋಡಿ ದಂಗಾದ ಪೊಲೀಸರು, ಮಾಡಿದ್ದೇನು?

**ಬೆಳಗಾವಿ ವಾರ್ತೆ ಗದಗ:** ಹೆತ್ತ ಮಗುವಿನ ಜೀವವನ್ನು ಪಣಕ್ಕಿಟ್ಟು, ಬೈಕ್‌ನ ಸೈಡ್ ಲಗೇಜ್ ಬಾಕ್ಸ್‌ನಲ್ಲಿ ಕೂರಿಸಿಕೊಂಡು ತಂದೆಯೊಬ್ಬ ಬೇಜವಾಬ್ದಾರಿಯುತವಾಗಿ ಪ್ರಯಾಣಿಸಿದ ಘಟನೆಯೊಂದು ಗದಗದಲ್ಲಿ ನಡೆದಿದ್ದು, ಈ ಕುರಿತ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.



ಸವಾರನೊಬ್ಬ ತನ್ನ ದ್ವಿಚಕ್ರ ವಾಹನದ ಸೈಡ್ ಲಗೇಜ್ ಬ್ಯಾಗ್ (ಸಾಮಾನ್ಯವಾಗಿ ದಾಖಲೆ ಅಥವಾ ದಿನಸಿ ಇಡಲು ಬಳಸುವ ಬಾಕ್ಸ್) ಒಳಗೆ ಪುಟ್ಟ ಮಗುವನ್ನು ಕೂರಿಸಿದ್ದು, ಮಗುವಿನ ಕುತ್ತಿಗೆಯವರೆಗಿನ ಭಾಗ ಬ್ಯಾಗ್ ಒಳಗಿದ್ದು, ತಲೆ ಮಾತ್ರ ಬಾಕ್ಸ್‌ನ ಮೇಲ್ಭಾಗದಿಂದ ಕಾಣಿಸುತ್ತಿದ್ದ ದೃಶ್ಯ ಸಾರ್ವಜನಿಕರನ್ನು ಬೆಚ್ಚಿಬೀಳುವಂತೆ ಮಾಡಿತ್ತು.

ಈ ಘಟನೆ ಗುರುವಾರ ಟಿಪ್ಪು ಸರ್ಕಲ್‌ನಿಂದ ಜಿಲ್ಲಾಧಿಕಾರಿ ಕಚೇರಿ ಕಡೆಗೆ ತೆರಳುವ ಮಾರ್ಗದಲ್ಲಿ ನಡೆದಿದ್ದು, ಭಾರಿ ವಾಹನಗಳು ಸಂಚರಿಸುವ ರಸ್ತೆಯಲ್ಲಿ ಮಗುವನ್ನು ಇಷ್ಟು ಅಪಾಯಕಾರಿಯಾಗಿ ಕರೆದೊಯ್ಯುತ್ತಿರುವುದನ್ನು ಕಂಡು ದಾರಿಹೋಕರು ಅಪಾಯದ ಬಗ್ಗೆ ಎಚ್ಚರಿಕೆ ನೀಡಿದರೂ, ಆತ ಅದನ್ನು ಲೆಕ್ಕಿಸದೇ ಪ್ರಯಾಣ ಮುಂದುವರಿಸಿದ್ದಾನೆ ಎನ್ನಲಾಗಿದೆ. ಈ ನಡುವೆ ಸ್ಥಳೀಯರು ಈ ಬೇಜವಾಬ್ದಾರಿತನದ ದೃಶ್ಯವನ್ನು ತಮ್ಮ ಮೊಬೈಲ್ ಕ್ಯಾಮೆರಾಗಳಲ್ಲಿ ಸೆರೆಹಿಡಿದು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದಾರೆ.

ಈ ಕುರಿತ ವಿಡಿಯೋ ಮತ್ತು ಫೋಟೋಗಳು ವೈರಲ್ ಆಗುತ್ತಿದ್ದಂತೆ ನೆಟ್ಟಿಗರು ಈತನ ಹುಚ್ಚಾಟದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

"ಆಯತಪ್ಪಿದರೂ ಮಗುವಿನ ಜೀವಕ್ಕೆ ಅಪಾಯವಿತ್ತು, ಇಂತಹ ವ್ಯಕ್ತಿಗೆ ಕಠಿಣ ಶಿಕ್ಷೆಯಾಗಬೇಕು" ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಈ ವೀಡಿಯೋ ಹಾಗೂ ಫೋಟೋಗಳು ವೈರಲ್ ಆಗುತ್ತಿದ್ದಂತೆಯೇ, ಇದನ್ನು ಗಂಭೀರವಾಗಿ ಪರಿಗಣಿಸಿದ ಗದಗ ಸಂಚಾರಿ ಪೊಲೀಸರು, ದೃಶ್ಯದಲ್ಲಿದ್ದ ಬೈಕ್‌ನ ನೋಂದಣಿ ಸಂಖ್ಯೆಯನ್ನು (Registration Number) ಆಧರಿಸಿ ತನಿಖೆ ಕೈಗೊಂಡು, ಬೈಕ್ ಮಾಲೀಕನನ್ನು ಪತ್ತೆಹಚ್ಚಿ ಸಂಚಾರಿ ಪೊಲೀಸ್ ಠಾಣೆಗೆ ಕರೆಸಿದ್ದಾರೆ.

ವಿಚಾರಣೆ ವೇಳೆ, ಮಾರುಕಟ್ಟೆಗೆ ಹೋಗುವಾಗ ಹಾಗೂ ಹಿಂದಿರುಗುವಾಗ ಮಗುವನ್ನು ಇದೇ ರೀತಿಯಲ್ಲಿ ಕರೆದೊಯ್ಯುತ್ತಿದ್ದೆ ಎಂದು ಆತ ಹೇಳಿದ್ದಾನೆ.

ಆದರೆ ಈ ವಿವರಣೆಯನ್ನು ಪೊಲೀಸರು ಒಪ್ಪದೆ, ಸಂಚಾರ ನಿಯಮ ಉಲ್ಲಂಘನೆ ಹಾಗೂ ಮಗುವಿನ ಜೀವಕ್ಕೆ ಅಪಾಯ ಉಂಟುಮಾಡಿದ ಹಿನ್ನೆಲೆಯಲ್ಲಿ ಭಾರೀ ದಂಡ ವಿಧಿಸಿ, ಇಂತಹ ನಿರ್ಲಕ್ಷ್ಯವನ್ನು ಮರುಕಳಿಸದಂತೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

"ಸಣ್ಣ ಬ್ರೇಕ್ ಹಾಕಿದರೂ, ವಾಹನ ಸಮತೋಲನ ಕಳೆದುಕೊಂಡರೂ ಅಥವಾ ಅಪಘಾತ ಸಂಭವಿಸಿದರೂ ಮಗುವಿನ ಜೀವಕ್ಕೆ ಗಂಭೀರ ಅಪಾಯ ಉಂಟಾಗುತ್ತಿತ್ತು. ಮಕ್ಕಳ ಸುರಕ್ಷತೆಯಲ್ಲಿ ಯಾವುದೇ ರಾಜಿ ಸಾಧ್ಯವಿಲ್ಲ," ಎಂದು ಪೊಲೀಸರು ತಿಳಿಸಿದ್ದಾರೆ.

ಸ್ಥಳೀಯ ನಿವಾಸಿ ಗಿರೀಶ್ ಕಟ್ಟಿ ಪೊಲೀಸ್ ಕ್ರಮವನ್ನು ಸ್ವಾಗತಿಸಿ, "ವಿಡಿಯೋ ನೋಡಿದವರು ಎಲ್ಲರೂ ಆತಂಕಗೊಂಡಿದ್ದರು. ಸಣ್ಣ ತಪ್ಪಿನಿಂದಲೇ ಮಗುವಿನ ಜೀವಕ್ಕೆ ಅಪಾಯವಾಗಬಹುದಿತ್ತು. ದಂಡ ವಿಧಿಸಿ ಎಚ್ಚರಿಕೆ ನೀಡಿರುವುದು ಸರಿಯಾದ ಕ್ರಮ ಎಂದು ಅಭಿಪ್ರಾಯಪಟ್ಟಿದ್ದಾರೆ.

ಇದು ಕೇವಲ ಸಂಚಾರ ನಿಯಮ ಉಲ್ಲಂಘನೆಯಷ್ಟೇ ಅಲ್ಲ, ಮಕ್ಕಳ ಸುರಕ್ಷತೆಯ ದೃಷ್ಟಿಯಿಂದಲೂ ಗಂಭೀರ ಅಪರಾಧವಾಗಿದೆ. ರಸ್ತೆ ಸುರಕ್ಷತೆ ಕುರಿತು ನಿರಂತರ ಜಾಗೃತಿ ಮೂಡಿಸುತ್ತಿದ್ದರೂ ಕೆಲವರು ಇನ್ನೂ ನಿರ್ಲಕ್ಷ್ಯ ತೋರುತ್ತಿರುವುದು ಕಳವಳಕಾರಿ ಎಂದು ಅಧಿಕಾರಿಗಳು ಹೇಳಿದ್ದಾರೆ.

# ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕೆ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಧಾರವಾಡ:** ಇಂದು ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಸ್ಪತ್ರೆಯಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕೆ ಕಾರ್ಯಕ್ರಮವನ್ನು ಶಾಸಕರಾದ ಎನ್.ಎಚ್.ಕೋನರೆಡ್ಡಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಮಕ್ಕಳಿಗೆ ಪೋಲಿಯೊ ಹನಿ ಹಾಕುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಅಡಿವೇಶ ಇಟಗಿ, ಮಹಾಪೌರ ಜ್ಯೋತಿ ಪಾಟೀಲ, ಪಾಲಿಕೆಯ ಸಭಾನಾಯಕ ಈರೇಶ ಅಂಚಟಗೇರಿ, ಪಾಲಿಕೆ ಸದಸ್ಯ ಸುರೇಶ ಬೇದರೆ, ಕುಷ್ಠರೋಗ ವಿಭಾಗದ ಜಂಟಿ ನಿರ್ದೇಶಕಿ ಡಾ.ಉಮಾ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಸಂಗಪ್ಪ ಗಾಬಿ, ಜಿಲ್ಲಾ ಆರ್.ಸಿ.ಎಚ್.ಒ ಅಧಿಕಾರಿ ಡಾ.ಸುಜಾತಾ ಹಸವಿಮಠ, ತಾಲೂಕು ವೈದ್ಯಾಧಿಕಾರಿ ಡಾ.ತನುಜಾ, ಆರೋಗ್ಯಾಧಿಕಾರಿ ಡಾ.ಗೌರಿ ಬೆಲ್ಲದ, ಡಾ.ಅಶ್ವಿನಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರು, ಮಕ್ಕಳು ಇತರರು ಉಪಸ್ಥಿತರಿದ್ದರು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಪರಶುರಾಮ ಎಫ್.ಕೆ. ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಡಾ.ಶೋಭಾ ಕುಲಕರ್ಣಿ ಪ್ರಾರ್ಥಿಸಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಆರ್.ಪಾತ್ರೋಟ ಸ್ವಾಗತಿಸಿ ವಂದಿಸಿದರು.

# ನೀರಿಗಾಗಿ ಹಾಹಾಕಾರ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ತಾಲೂಕಿನ ಬೈಲೂರ ಗ್ರಾಪಂ ವ್ಯಾಪ್ತಿಯ ದೇಗುಲಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದ್ದು ಹಲವು ದಿನಗಳಿಂದ ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.

ಕಳೆದ 2–3 ತಿಂಗಳಿಂದ ನೀರು ಬರದ ಕಾರಣ ಕುಡಿಯುವ ನೀರಿಗಾಗಿ ಗ್ರಾಮದ ಮಹಿಳೆಯರು ಹೊಲಗಳಲ್ಲಿನ ಕೊಳವೆ ಬಾವಿಗಳಲ್ಲಿ ನೀರು ತರಲು ಹೋಗುತ್ತಿರುವ ದೃಶ್ಯಗಳು ಕಂಡು ಬಂದಿವೆ.

ಗ್ರಾಪಂ ಅಧಿಕಾರಿಗಳ ನಿರ್ಲಕ್ಷದಿಂದ ಗ್ರಾಮದ ಜನರು ನೀರಿಗಾಗಿ ಪರಿತಪಿಸುತ್ತಿದ್ದಾರೆ. ಗ್ರಾಮದಲ್ಲಿ ಉಂಟಾಗುವ ನೀರಿನ ಸಮಸ್ಯೆಗೆ ಪರಿಹಾರ ನೀಡುವಂತೆ ಗ್ರಾಮಸ್ಥರು ಗ್ರಾಪಂಗೆ ಹಲವು ಬಾರಿ ಮನವಿ ಸಲ್ಲಿಸಿದರು. ಪ್ರಯೋಜನವಾಗಿಲ್ಲ. ಇದುವರೆಗೆ ಸಮಸ್ಯೆಗೆ ಪರಿಹಾರ ಸಿಕ್ಕಿಲ್ಲ. ಇದರಿಂದ ಗ್ರಾಮಸ್ಥರು ಅಧಿಕಾರಿಗಳ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ.

ಇದಲ್ಲದೇ ಗ್ರಾಮದಲ್ಲಿರುವ ಬಹುತೇಕ ಚರಂಡಿಗಳು ಸ್ವಚ್ಚಗೊಳಸದ ಕಾರಣ ಕೊಳಚೆ ಗಬ್ಬು ನಾರುತ್ತಿದೆ. ಅನೈರ್ಮಲ್ಯದಿಂದ ಕೂಡಿದ ಚರಂಡಿಗಳು ಸಾರ್ವಜನಿಕರ ಆರೋಗ್ಯಕ್ಕೆ ಅಪಾಯ ಉಂಟು ಮಾಡುತ್ತಿದೆ. ತ್ಯಾಜ್ಯ ಮತ್ತು ಕಸಕಡ್ಡಿಗಳಿಂದ ತುಂಬಿದ ಚರಂಡಿಗಳು ಸಾಂಕ್ರಾಮಿಕ ರೋಗಗಳಿಗೆ ಕಾರಣವಾಗಿದೆ.

ನಿಂತ ಕೊಳಚೆ ನೀರು ಡೆಂಗ್ಯೂ, ಮಲೇರಿಯಾ ಹರಡುವ ಕೇಂದ್ರವಾಗಿದೆ. ಅದು ಎಸ್ಸಿ,ಎಸ್ಟಿ ಕಾಲೋನಿಯಲ್ಲಿಯಂತು ಕೊಳೆತ ತ್ಯಾಜ್ಯದಿಂದ ಹೊರ ಸುಸೂವ ಕೆಟ್ಟ ಗಾಳಿ ಪರಿಸರ ಮಲೀನಗೊಳಿಸಿ ಉಸಿರಾಟದ ತೊಂದರೆ ಮತ್ತು ವಾಂತಿಗೆ ಕಾರಣವಾಗಿದೆ ಎಂದು ಸಾರ್ವಜನಿಕರು ಹೇಳಿದ್ದಾರೆ.

ಗ್ರಾಪಂದವರು ಚರಂಡಿಯನ್ನು ನಿಯಮಿತವಾಗಿ ಸ್ವಚ್ಛಗೊಳಿಸಬೇಕು. ಪ್ಲಾಸ್ಟಿಕ್ ಇನ್ನಿತರ ತ್ಯಾಜ್ಯ ವಸ್ತುಗಳನ್ನು ಚರಂಡಿಗೆ ಹಾಕದೇ ಕಸದ ಬುಟ್ಟಿಗಳಲ್ಲಿ ಮಾತ್ರ ವಿಲೇವಾರಿ ಮಾಡುಲು ಮಾತ್ರ ಕ್ರಮ ಕೈಗೊಳ್ಳಬೇಕು. ಹಳ್ಳಿಗಳ ಸುಧಾರಣೆಗೆ ಕೇಂದ್ರ–ರಾಜ್ಯ ಸರ್ಕಾರಗಳು ನೂರಾರು ಕೋಟಿ ಅನುದಾನ ವ್ಯಯಿಸುತ್ತಿವೆ. ಸ್ಥಳೀಯ ಶಾಸಕರ ಅನುದಾನಡಿಯಲ್ಲಿ ಗ್ರಾಮ ಅಭಿವೃದ್ಧಿಗೊಂಡಿದೆ ಆದರೆ ಅಧಿಕಾರಿಗಳ ಇಚ್ಛಾ ಶಕ್ತಿ ಕೊರತೆಯಿಂದ ಮತ್ತು ಆಡಳಿತ ವ್ಯವಸ್ಥೆ ವೈಫಲ್ಯದಿಂದ ಗ್ರಾಮಗಳಲ್ಲಿ ನೀರಿನ ವ್ಯವಸ್ಥೆ ಮತ್ತು ಗ್ರಾಮ ಸ್ವಚ್ಛತೆ, ಬೀದಿ ದೀಪ ಮರಿಚೀಕೆಯಾಗಿದೆ. ಇಷ್ಟೆಲ್ಲಾ ಆದರೂ ಗ್ರಾಪಂ ಮತ್ತು ತಾಪಂ ಅಧಿಕಾರಿಗಳು ಮೌನಕ್ಕೆ ಶರಣಾಗಿದ್ದಾರೆ.

# ಸಾರ್ವಜನಿಕರ ಗಮನಕ್ಕೆ

**ಬೆಳಗಾವಿ ವಾರ್ತೆ ಗದಗ:** ಸಾರಿಗೆ ಇಲಾಖೆಯಲ್ಲಿ 01–04–1991 ರಿಂದ 31–03–2022 ರ ಅವಧಿಯಲ್ಲಿ ದಾಖಲಾಗಿ ಪಾವತಿಗೆ ಬಾಕಿಯಿರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50% (ಐವತ್ತರಷ್ಟು ಮಾತ್ರ) ರಿಯಾಯಿತಿ ನೀಡಿ, ದಿನಾಂಕ.21–06–2026 ರಿಂದ 10–07–2026 ರವರೆಗೆ ಕಾಲಾವಕಾಶ ನೀಡಿದ್ದು, ಅದರಂತೆ ಸಾರ್ವಜನಿಕರಿಂದ ಬಾಕಿಯಿರುವ ಡಿ.ಎಸ್.ಎ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು ರಿಯಾಯಿತಿ ಪಡೆದುಕೊಳ್ಳಬೇಕೆಂದು ಸಾರ್ವಜನಿಕರಿಗೆ ತಿಳಿಸಲಾಗಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.


# ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ವತಿಯಿಂದ “ಭಾರತ್ ಜೋಡೋ ಭವನ"ದಲ್ಲಿ ನಾಳೆ ಒಂದು ದಿನದ ವಿಚಾರ ಸಂಕೀರಣ

**ಬೆಳಗಾವಿ ವಾರ್ತೆ ಗದಗ:** ಬೆಂಗಳೂರಿನ ಕೆಪಿಸಿಸಿಯ “ಭಾರತ್ ಜೋಡೋ ಭವನ"ದಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ವತಿಯಿಂದ ಕೆಪಿಸಿಸಿ ಪ್ರಚಾರ ಸಮಿತಿ ರಾಜ್ಯಾಧ್ಯಕ್ಷ ವಿನಯ ಕುಮಾರ ಸೊರಕೆ ಅವರ ನೇತೃತ್ವದಲ್ಲಿ 01–07–2026ರಂದು ಬೆಳಿಗ್ಗೆ 10.30ಕ್ಕೆ ಒಂದು ದಿನದ ವಿಚಾರ ಸಂಕೀರಣ ಜರುಗಲಿದೆ. ಕೆಪಿಸಿಸಿ ಪ್ರಚಾರ ಸಮಿತಿಯ ರಾಜ್ಯ ಪದಾಧಿಕಾರಿಗಳ, ಪ್ರಚಾರ ಸಮಿತಿಯ ಜಿಲ್ಲಾ ಅಧ್ಯಕ್ಷರು, ಉಪಾಧ್ಯಕ್ಷರು, ಮುಖ್ಯ ಸಂಯೋಜಕರು, ಪ್ರಚಾರ ಸಮಿತಿಯ ಬ್ಲಾಕ್ ಅಧ್ಯಕ್ಷರುಗಳು ಹಾಗೂ ಉಪಾ ಧ್ಯಕ್ಷರಿಗೆ ಮುಂಬರುವ ಚುನಾವಣಾ ದೃಷ್ಟಿ ಯಿಂದ ಮಹತ್ವದ ವಿಚಾರ ಸಂಕೀರಣ ನಡೆಯಲಿದೆ. ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿ ಪ್ರಸಾದ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಕೆಪಿಸಿಸಿ ಪ್ರಚಾರ ಸಮಿತಿಯ ಸಹ–ಅಧ್ಯಕ್ಷ ಎಲ್. ಹನುಮಂತಯ್ಯನವರು ಭಾಗವಹಿಸಲಿದ್ದಾರೆ.



ಆದ್ದರಿಂದ ವಿಚಾರ ಸಂಕೀರಣದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯ ಪದಾಧಿಕಾರಿಗಳು & ಗದಗ ಜಿಲ್ಲೆಯ ಎಲ್ಲ ಬ್ಲಾಕ್‌ನ ಪ್ರಚಾರ ಸಮಿತಿಯ ಪದಾಧಿಕಾರಿಗಳು ಭಾಗವಹಿ ಸಬೇಕು ಎಂದು ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷರಾದ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಬೆಳಗಾವಿ: ನಿದ್ರೆಯಲ್ಲಿದ್ದ ಪತ್ನಿಯನ್ನು ಮಾರಾಕಾಸ್ತ್ರಗಳಿಂದ ಕೊಚ್ಚಿ ಕೊಲೆಗೈದ ಪತಿ..!



**ಬೆಳಗಾವಿ ವಾರ್ತೆ ಬೆಳಗಾವಿ:** ಪತ್ನಿಯ ಚಾರಿತ್ರ್ಯ ಶಂಕಿಸಿದ್ದ ಪತಿಯೊಬ್ಬ ಗಾಢ ನಿದ್ರೆಯಲ್ಲಿದ್ದ ಪತ್ನಿಯನ್ನು ಮಾರಕಾಸ್ತ್ರದಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿದ ಘಟನೆ ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಕಟಗೇರಿ ಗ್ರಾಮದಲ್ಲಿ ನಡೆದಿದೆ.

ಮೃತಳನ್ನು ಅಥಣಿ ತಾಲೂಕಿನ ಖಾವತ್‌ಖೋಪ್ ಗ್ರಾಮದ ಮೂಲದ ಶೋಭಾ ಪರಗೊಂಡ ಸರ್ವಾಡ್ ಎಂದು ಗುರುತಿಸಲಾಗಿದ್ದು, ಆರೋಪಿ ಪರಗೊಂಡ ಸರ್ವಾಡ್ ನನ್ನು ಪೊಲೀಸರು ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

ಪೊಲೀಸರ ಮಾಹಿತಿ ಪ್ರಕಾರ, ಅಥಣಿ ತಾಲೂಕಿನ ಖವಟಕೊಪ್ಪ ಗ್ರಾಮದ ಮೂಲದ ದಂಪತಿ ಉದ್ಯೋಗದ ನಿಮಿತ್ತ ಕಟಗೇರಿ ಗ್ರಾಮದ ಆವಜೀಕರ ಮಠದಲ್ಲಿ ವಾಸವಾಗಿದ್ದರು. ಶೋಭಾ ಮಠದಲ್ಲಿ ಅಡುಗೆ ಕೆಲಸ ಮಾಡುತ್ತಿದ್ದರೆ, ಪರಗೊಂಡ ಚಾಲಕನಾಗಿ ಕೆಲಸ ನಿರ್ವಹಿಸುತ್ತಿದ್ದ ಎಂದು ತಿಳಿದುಬಂದಿದೆ.

ಕಳೆದ ಕೆಲವು ದಿನಗಳಿಂದ ಪತ್ನಿಯ ಚಾರಿತ್ರ್ಯದ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದ ಆರೋಪಿ, ಆಗಾಗ ಜಗಳವಾಡುತ್ತಿದ್ದ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಇದೇ ಅನುಮಾನದ ಹಿನ್ನೆಲೆಯಲ್ಲಿ ಶೋಭಾ ನಿದ್ರೆಯಲ್ಲಿದ್ದ ವೇಳೆ ಆರೋಪಿ ಮಾರಕಾಸ್ತ್ರದಿಂದ ಹಲ್ಲೆ ನಡೆಸಿ. ಕೊಲೆ ಮಾಡಿದ್ದಾನೆ ಎಂದು ಪೊಲೀಸರು ಶಂಕಿಸಿದ್ದಾರೆ.

ವಿಚಾರ ತಿಳಿಯುತ್ತಿದ್ದಂತೆ ಸ್ಥಳೀಯರು ಸ್ಥಳಕ್ಕೆ ಧಾವಿಸಿದ್ದು, ಕಟಗೇರಿ ಗ್ರಾಮದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಮಾಹಿತಿ ಪಡೆದ ಅಥಣಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.

ಆರೋಪಿ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಮರಣೋತ್ತರ ಪರೀಕ್ಷೆಯ ವರದಿಗಾಗಿ ಕಾಯುತ್ತಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆ ಮುಂದುವರಿಸಿದ್ದಾರೆ.

# ಮುಖ್ಯಮಂತ್ರಿ ತಕ್ಷಣ ಬರಗಾಲ ಘೋಷಣೆ ಮಾಡಲಿ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ರಾಜ್ಯದಲ್ಲಿ ಮಳೆಯ ಕೊರತೆಯಿಂದ ಬರದ ಪರಿಸ್ಥಿತಿ ನಿರ್ಮಾಣವಾಗುತ್ತಿದ್ದು, ಇನ್ನೊಂದು ವಾರದೊಳಗೆ ಸಮರ್ಪಕ ಮಳೆಯಾಗ ದಿದ್ದರೆ ಕರ್ನಾಟಕ ಸಂಪೂರ್ಣ ಬರಗಾಲದತ್ತ ಸಾಗುವ ಸಾಧ್ಯತೆಯಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಎಚ್ಚರಿಕೆ ನೀಡಿದ್ದಾರೆ. ತಕ್ಷಣವೇ ಜಿಲ್ಲಾಧಿಕಾರಿಗಳ ಸಭೆ ನಡೆಸಿ ರಾಜ್ಯದಲ್ಲಿ ಬರಗಾಲ ಘೋಷಿಸುವಂತೆ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಆಗ್ರಹಿಸಿದರು.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬೊಮ್ಮಾಯಿ, ರಾಜ್ಯದಲ್ಲಿ ಈವರೆಗೆ ಕೇವಲ ಶೇ.30ರಷ್ಟು ಮಾತ್ರ ಬಿತ್ತನೆಯಾಗಿದ್ದು, ಶೇ.70ರಷ್ಟು ಪ್ರದೇಶಗಳಲ್ಲಿ ಇನ್ನೂ ಬಿತ್ತನೆ ಪ್ರಾರಂಭವಾಗಿಲ್ಲ ಎಂದು ತಿಳಿಸಿದರು. ಮಳೆಯ ಕೊರತೆಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಮುಂದಿನ ಒಂದು ವಾರದಲ್ಲಿಯೂ ಮಳೆ ಬಾರದಿದ್ದರೆ ಕುಡಿಯುವ ನೀರಿನ ಸಮಸ್ಯೆಯೂ ಗಂಭೀರ ಸ್ವರೂಪ ಪಡೆಯಲಿದೆ ಎಂದು ಹೇಳಿದರು.

ಇಂತಹ ಗಂಭೀರ ಪರಿಸ್ಥಿತಿಯಲ್ಲಿ ಸರ್ಕಾರ ತಕ್ಷಣ ಎಚ್ಚೆತ್ತುಕೊಳ್ಳಬೇಕಿದ್ದು, ಎಲ್ಲ ಜಿಲ್ಲಾಧಿಕಾರಿಗಳ ಸಭೆ ನಡೆಸಿ ವಾಸ್ತವ ಸ್ಥಿತಿಯ ವರದಿ ಪಡೆಯಬೇಕು. ಬರ ಪರಿಹಾರ ಕ್ರಮಗಳನ್ನು ತುರ್ತಾಗಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದ ಅವರು, ಪ್ರಕೃತಿ ವಿಕೋಪ ಪರಿಹಾರ ನಿಧಿಯಲ್ಲಿ ಹಣ ಲಭ್ಯವಿದ್ದು, ಅದನ್ನು ಸಮರ್ಪಕವಾಗಿ ಬಳಕೆ ಮಾಡಿದರೆ ಕೇಂದ್ರ ಸರ್ಕಾರದಿಂದ ಹೆಚ್ಚುವರಿ ನೆರವು ಪಡೆಯಲು ಸಾಧ್ಯವಾಗುತ್ತದೆ ಎಂದರು.

ರಾಜ್ಯದಲ್ಲಿ ಮಳೆ ಇಲ್ಲದೆ ಕೆರೆಗಳು ಹಾಗೂ ಜಲಾಶಯಗಳಲ್ಲಿನ ನೀರಿನ ಮಟ್ಟ ದಿನದಿಂದ ದಿನಕ್ಕೆ ಕುಸಿಯುತ್ತಿದೆ. ಇಂತಹ ಸಂದರ್ಭದಲ್ಲಿ ರಾಜ್ಯದಲ್ಲಿ ಸಮರ್ಪಕ ಕೃಷಿ ಸಚಿವರೇ ಇಲ್ಲದಿರುವುದು ದುರದೃಷ್ಟಕರ ಎಂದು ಬೊಮ್ಮಾಯಿ ಟೀಕಿಸಿದರು. ಎರಡು ಅಥವಾ ಮೂರು ಜಿಲ್ಲೆಗಳಿಗೆ ಒಬ್ಬ ಸಚಿವರನ್ನು ನೇಮಿಸಿರುವುದರಿಂದ ಯಾವುದೇ ಪ್ರಯೋಜನವಿಲ್ಲ ಎಂದು ಹೇಳಿದರು.

ಎಲ್ನಿನೋ ಪರಿಣಾಮ ಹಾಗೂ ಸಂಭವನೀಯ ಬರ ಪರಿಸ್ಥಿತಿಯ ಕುರಿತು ರಾಷ್ಟ್ರೀಯ ವರದಿಗಳು ಈಗಾಗಲೇ ಎಚ್ಚರಿಕೆ ನೀಡಿದ್ದರೂ ಸರ್ಕಾರ ಅದನ್ನು ಗಂಭೀರವಾಗಿ ಪರಿಗಣಿಸಿಲ್ಲ ಎಂದು ಆರೋಪಿಸಿದ ಅವರು, ಮುಖ್ಯಮಂತ್ರಿ ತಕ್ಷಣ ಬರ ಪರಿಸ್ಥಿತಿ ನಿರ್ವಹಣೆಯತ್ತ ಗಮನ ಹರಿಸಬೇಕು ಎಂದು ಆಗ್ರಹಿಸಿದರು.

# ಗಂಡು ಮಗು ಜನಿಸಿದ ಸಂಭ್ರಮಕ್ಕೆ ಪಾರ್ಟಿ ಕೇಳಿದ್ದಕ್ಕೆ ಸ್ನೇಹಿತನ ಕೊಲೆ

**ಬೆಳಗಾವಿ ವಾರ್ತೆ ಬೆಳಗಾವಿ:** ಜಿಲ್ಲೆಯ ಬೈಲಹೊಂಗಲ ತಾಲೂಕಿನ ವಣ್ಣೂರ ಗ್ರಾಮದಲ್ಲಿ ಕ್ಷಣಿಕ ಕೋಪವೇ ಭೀಕರ ದುರಂತಕ್ಕೆ ಕಾರಣ ವಾಗಿದ್ದು, ಗಂಡು ಮಗು ಜನಿಸಿದ ಹಿನ್ನೆಲೆ ಯಲ್ಲಿ ಪಾರ್ಟಿ ನೀಡುವಂತೆ ಕೇಳಿದ್ದ ಸ್ನೇಹಿತನನ್ನು ಕಲ್ಲಿನಿಂದ ಹೊಡೆದು ಹತ್ಯೆ ಮಾಡಿದ ಘಟನೆ ನಡೆದಿದೆ. ಮೃತರನ್ನು ವಣ್ಣೂರ ಗ್ರಾಮದ ಹಣಮಂತಪ್ಪ ಯಮನಪ್ಪ ಇಟಗಿ ಎಂದು ಗುರುತಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿ ಸಿದಂತೆ ವಿಶ್ವನಾಥ ಪೂಜೇರಿ ಎಂಬಾತ ನನ್ನು ಪೊಲೀಸರು ಬಂಧಿಸಿದ್ದು, ನೇಸರಗಿ ಪೊಲೀಸ್ ಠಾಣೆಯಲ್ಲಿ ವಿಚಾರಣೆ ಮುಂದುವರಿದಿದೆ.



ಪೊಲೀಸರ ಮಾಹಿತಿ ಪ್ರಕಾರ, ಘಟನೆಯ ದಿನ ಇಬ್ಬರೂ ಗ್ರಾಮದ ಕಟ್ಟೆಯ ಬಳಿ ಕುಳಿತು ಮದ್ಯ ಸೇವಿಸುತ್ತಾ ಮಾತುಕತೆ ನಡೆಸುತ್ತಿದ್ದರು. ಈ ವೇಳೆ ವಿಶ್ವನಾಥನಿಗೆ ಇತ್ತೀಚೆಗೆ ಗಂಡು ಮಗು ಜನಿಸಿರುವ ಹಿನ್ನೆಲೆಯಲ್ಲಿ ಹಣಮಂತಪ್ಪ ಪಾರ್ಟಿ ನೀಡುವಂತೆ ಕೇಳಿದ್ದಾನೆ. ಈ ವಿಷಯ ಇಬ್ಬರ ನಡುವೆ ವಾಗ್ವಾದಕ್ಕೆ ಕಾರಣವಾಗಿದೆ.

ವಾದ–ವಿವಾದ ತೀವ್ರಗೊಂಡ ಸಂದರ್ಭದಲ್ಲಿ ಹಣಮಂತಪ್ಪನ ಕೈ ಆಕಸ್ಮಿಕವಾಗಿ ವಿಶ್ವನಾಥನ ಕಣ್ಣಿಗೆ ತಾಗಿದ್ದು, ಇದರಿಂದ ಆಕ್ರೋಶಗೊಂಡ ವಿಶ್ವನಾಥ ಸಮೀಪದಲ್ಲಿದ್ದ ಕಲ್ಲನ್ನು ಎತ್ತಿಕೊಂಡು ಹಣಮಂತಪ್ಪನ ತಲೆಗೆ ಬಲವಾಗಿ ಹೊಡೆದಿದ್ದಾನೆ ಎನ್ನಲಾಗಿದೆ. ತಲೆಗೆ ತೀವ್ರ ಪೆಟ್ಟಾಗಿದ್ದರಿಂದ ಹಣಮಂತಪ್ಪ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಘಟನೆ ಬಳಿಕ ಆರೋಪಿ ಸ್ಥಳದಿಂದ ಪರಾರಿಯಾಗಿದ್ದರೂ, ತನಿಖೆ ಕೈಗೊಂಡ ನೇಸರಗಿ ಠಾಣೆ ಪೊಲೀಸರು ಶೀಘ್ರ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ. ಮೋಹರಂ ಹಬ್ಬದ ಸಂಭ್ರಮದಲ್ಲಿದ್ದ ಗ್ರಾಮದಲ್ಲಿ ಈ ಘಟನೆ ಶೋಕದ ಛಾಯೆ ಮೂಡಿಸಿದ್ದು, ಗ್ರಾಮಸ್ಥರು ಆಘಾತ ವ್ಯಕ್ತಪಡಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಹೆಚ್ಚಿನ ತನಿಖೆ ಮುಂದುವರಿಸಿದ್ದಾರೆ.

# ಕೇಂದ್ರ ಸಾಹಿತ್ಯ ಅಕಾಡೆಮಿ / ಸಾಹಿತ್ಯಾಂತರಂಗ ವಿಚಾರ ಸಂಕಿರಣ

## ಸಾಹಿತ್ಯ ರೂಪಗಳ ಒಳ–ಹೊರಗು ಪರಿಚಯಿಸಿದ ಸಾಹಿತ್ಯಾಂತರಂಗ

**ಬೆಳಗಾವಿ ವಾರ್ತೆ ಧಾರವಾಡ:** ಭಾರತೀಯ ಎಲ್ಲ ಭಾಷೆಗಳಲ್ಲೂ ವರ್ಷಕ್ಕೆ ಐದು ನೂರಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ಆಯೋಜಿಸುವ, ಹೊಸ ದಿಲ್ಲಿಯ ಕೇಂದ್ರ ಸಾಹಿತ್ಯ ಅಕಾಡೆಮಿ, ಪ್ರತಿವರ್ಷ 500 ಗ್ರಂಥಗಳನ್ನು ಪ್ರಕಟಿಸುತ್ತಿರುವುದಲ್ಲದೆ, ವಾರ್ಷಿಕ ಮುಖ್ಯ ಪ್ರಶಸ್ತಿ, ಅನುವಾದ ಪ್ರಶಸ್ತಿ, ಬಾಲ ಮತ್ತು ಯುವ ಪುರಸ್ಕಾರಗಳನ್ನೂ ಒಳಗೊಂಡು ಹಿರಿಯ ಬರಹಗಾರರಿಗೆ ಫೆಲೋಶಿಪ್ ನೀಡುತ್ತಿದೆ ಎಂದು, ಸಾಹಿತ್ಯ ಅಕಾಡೆಮಿಯ ಸಾಮಾನ್ಯ ಸಲಹಾ ಸಮಿತಿಯ ಸದಸ್ಯ ಡಾ.ಬಸವರಾಜ ಸಾದರ ಹೇಳಿದರು.

ಆಕಾಶವಾಣಿ ಧಾರವಾಡ ಕೇಂದ್ರದ, ಶಾಲ್ಮಲಾ ಸಭಾಂಗಣದಲ್ಲಿ, ಕೇಂದ್ರ ಸಾಹಿತ್ಯ ಅಕಾಡೆಮಿ, ಆಕಾಶವಾಣಿ ಧಾರವಾಡ ಕೇಂದ್ರದ ಸಹಯೋಗದಲ್ಲಿ, (ಜೂನ್ 22, ಸೋಮವಾರ) "ಸಾಹಿತ್ಯ ವೇದಿಕೆ" ಕಾರ್ಯಕ್ರಮದಡಿ, ಇತ್ತೀಚೆಗೆ ಆಯೋಜಿಸಿದ್ದ, "ಸಾಹಿತ್ಯಾಂತರಂಗ"




ವಿಚಾರ ಸಂಕಿರಣದಲ್ಲಿ, ಅವರು ಪ್ರಾಸ್ತಾವಿಕ ನುಡಿಗಳನ್ನಾಡಿದರು.

ವಿಚಾರ ಸಂಕಿರಣದಲ್ಲಿ, ಡಾ.ರಾಘವೇಂದ್ರ ಪಾಟೀಲ ಅವರು ಸಣ್ಣಕಥೆಗಳ ಬಗ್ಗೆ, ಪ್ರೊ. ಮಲ್ಲಿಕಾರ್ಜುನ ಹಿರೇಮಠ ಅವರು ಕಾದಂಬರಿಗಳ ಬಗ್ಗೆ, ಡಾ.ವಿನಯಾ ವಕ್ಕುಂದ ಅವರು ಕಾವ್ಯ ಕುರಿತು ಮತ್ತು ಡಾ. ರಂಗನಾಥ ಕಂಟನಕುಂಟೆ ಅವರು ವಿಮರ್ಶೆಯ ಬಗ್ಗೆ ಉಪನ್ಯಾಸ ನೀಡಿದರು. ಆಕಾಶವಾಣಿ ಧಾರವಾಡ ಕೇಂದ್ರದ, ತಾಂತ್ರಿಕ ವಿಭಾಗದ ಉಪ ಮಹಾ ನಿರ್ದೇಶಕ ಕೆ. ಅರುಣ ಪ್ರಭಾಕರ ಕಾರ್ಯಕ್ರಮ ಉದ್ಘಾಟಿಸಿದರು. ನಿಲಯದ ಕಾರ್ಯಕ್ರಮ ಮುಖ್ಯಸ್ಥರಾದ, ಮಂಜುಳಾ ಪುರಾಣಿಕ ಸ್ವಾಗತಿಸಿದರು. ಹಿರಿಯ ಉದ್ಘೋಷಕಿ ಮಾಯಾ ರಾಮನ್ ಪ್ರಾರ್ಥಿಸಿದರು. ಹಿರಿಯ ಉದ್ಘೋಷಕಿ ಸುರೇಖಾ ಸುರೇಶ ನಿರೂಪಿಸಿದರು. ಸಹಾಯಕ ಅಭಿಯಂತರ ಸುರೇಶ ಕಾಂಬಳೆ ವಂದಿಸಿದರು.

# ರಾಜ್ಯಸಭೆ ಸದಸ್ಯ ಮಾ. ನಾಗರಾಜ ಅವರಿಗೆ ಹಾಲುಮತ ಮಹಾಸಭಾದಿಂದ ಸನ್ಮಾನ



**ಬೆಳಗಾವಿ ವಾರ್ತೆ ಗದಗ:** ಇತ್ತೀಚಿಗೆ ರಾಜ್ಯಸಭೆಯ ನೂತನ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾದ ಪ್ರೋ. ಮಾ. ನಾಗರಾಜ ಅವರು ನಗರದ ಬಿ.ಎಫ್.ದಂಡಿನ ಅವರ ನಿವಾಸಕ್ಕೆ ಆಗಮಿಸಿದ ಸಂದರ್ಭದಲ್ಲಿ ಅವರನ್ನು ಹಾಲುಮತ ಮಹಾಸಭಾದ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷರಾದ ರುದ್ರಣ್ಣ ಗುಳಗುಳಿ, ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷರಾದ ರವೀಂದ್ರನಾಥ ದಂಡಿನ, ಮುಖಂಡರಾದ ಸೋಮನಗೌಡ ಪಾಟೀಲ, ಬಸವರಾಜ ಕುರಿ, ರಮೇಶ ಸಜ್ಜಗಾರ, ಎಸ್.ಎಚ್. ವೆಂಕಟಾಪೂರ, ಕುಮಾರ ಮಾರನಬಸರಿ, ಸಿದ್ದು ಚೌಡಕೇರ, ಹರ್ಲಾಪೂರ ಗ್ರಾಮ ಪಂಚಾಯತಿಯ ಸದಸ್ಯರಾದ ಸಿದ್ದು ಯಳವಾಡ, ಎಸ್‌ಡಿಎಂಸಿ ಅಧ್ಯಕ್ಷರಾದ ಮುರಗೇಶ ಕೋಗಿಲೆ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸ್ವಾಗತ



**ಬೆಳಗಾವಿ ವಾರ್ತೆ ಕೊಪ್ಪಳ:** ತುಂಗಭದ್ರಾ ಅಣೆಕಟ್ಟಿನ ಎಲ್ಲಾ 33 ಹೊಸ ಕ್ರಸ್ಟ್ ಗೇಟ್‌ಗಳ ಉದ್ಘಾಟನೆ ನಿಮಿತ್ತ, ಮುನಿರಬಾದ್ ರಿಸರ್ವ್ ಪೊಲೀಸ್ ಕವಯಾತು ಮೈದಾನದಲ್ಲಿ ಹೆಲಿಪ್ಯಾಡ್‌ಗೆ ಬಂದಿಳಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಕೊಪ್ಪಳ ಜಿಲ್ಲಾಡಳಿತ ವತಿಯಿಂದ ಸ್ವಾಗತಿ ಪೊಲೀಸ್ ಗೌರವ ವಂದನೆ ಸಲ್ಲಿಸಲಾಯಿತು.

ಈ ವೇಳೆ ಸಂಸದರಾದ ರಾಜಶೇಖರ ಹಿಟ್ನಾಳ್, ರಾಜ್ಯಸಭಾ ಸಂಸದರಾದ ಡಾ.ಸೈಯದ್ ನಾಸಿರ್ ಹುಸೇನ್, ಶಾಸಕರುಗಲಾದ ಹೆಚ್.ಕೆ. ಪಾಟೀಲ್, ಬಸವರಾಜ ರಾಯರೆಡ್ಡಿ, ಶಿವರಾಜ ತಂಗಡಿ, ಕೆ.ರಾಘವೇಂದ್ರ ಹಿಟ್ನಾಳ್, ಜಿ.ಎನ್.ಗಣೇಶ್, ಮಾಜಿ ಸಚಿವರಾದ ಅಮರೇಗೌಡ ಪಾಟೀಲ್ ಬೈಯಾಪುರ, ಬಳ್ಳಾರಿ ವಲಯದ ಪೊಲೀಸ್ ಮಹಾ ನಿರೀಕ್ಷಕರಾದ ಡಾ.ಪಿ.ಎಸ್. ಹರ್ಷ, ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ.ಸುರೇಶ್ ಇಟ್ನಾಳ್, ಜಿ.ಪಂ. ಸಿಇಓ ವರ್ಣೀತ್ ನೇಗಿ, ಎಸ್ಪಿ ಡಾ. ರಾಮ್ ಎಲ್. ಅರಸಿದ್ದಿ ಸೇರಿದಂತೆ ಹಲವು ಜನಪ್ರತಿನಿಧಿಗಳು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಿದ್ದಲಿಂಗ ಶಿವಾಚಾರ್ಯರು ಈ ಭಾಗದ ಮಹಾನ ತಪಸ್ವಿಗಳು



**ಬೆಳಗಾವಿ ವಾರ್ತೆ ಆಲಮೇಲ:** ಗುರು ಸಂಸ್ಥಾನ ಹಿರೇಮಠದಲ್ಲಿ ಲಿಂ. ಸಿದ್ದಲಿಂಗ ಶಿವಾಚಾರ್ಯರ ಹಾಗೂ ಗಾನಯೋಗಿ ಡಾ. ಪಂ ಪುಟ್ಟರಾಜ ಕವಿ ಗವಾಯಿಗಳ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದ ಲಿಂ. ಷ ಬ್ರ ಸಿದ್ದಲಿಂಗ ಶಿವಾಚಾರ್ಯರ ಹಾಗೂ ಗಾನಯೋಗಿ ಡಾ. ಪಂ ಪುಟ್ಟರಾಜ ಕವಿ ಗವಾಯಿಗಳ ಪುಣ್ಯ ಸ್ಮರಣೋತ್ಸವ ನಿಮಿತ್ಯ ತುಂತುರು ಮಳೆಯಲ್ಲಿ

ಬಮ್ಮನಹಳ್ಳಿ ಗ್ರಾಮದಿಂದ ಆಲಮೇಲ ಶ್ರೀಮಠದ ವರೆಗೆ ಸದ್ಭಾವನಾ ಪಾದಯಾತ್ರೆ ಹಮ್ಮಿಕೊಳ್ಳಲಾಗಿತ್ತು . ಪಾದಯಾತ್ರೆಯಲ್ಲಿ ಅನೇಕ ಪರಮಪೂಜ್ಯರು ಹಾಗೂ ಮಠದ ಸದ್ಭಕ್ತರು ಪಾಲ್ಗೊಂಡಿದ್ದರು ನಂತರ ಜರುಗಿದ ಧರ್ಮಸಭೆಯಲ್ಲಿ ಆಶೀರ್ವಚನ ನೀಡಿದ ಶ್ರೀಮಠದ ಒಡೆಯರಾದ ಚಂದ್ರಶೇಖರ ಶಿವಾಚಾರ್ಯರು ಲಿಂ ಶ್ರೀ ಸಿದ್ದಲಿಂಗ ಶಿವಾಚಾರ್ಯರ ಈ ಭಾಗದ ಮಹಾನ ತಪಸ್ವಿಗಳು ಅನೇಕ ಭಕ್ತರನ್ನು ಕಾಯಕದಿಂದ ಬದುಕುವ ದಾರಿಯನ್ನು ತೋರಿದ ಮಹಿಮಾ ಪುರುಷರು ಅವರ ಪುಣ್ಯಸ್ಮರಣೋತ್ಸವದ ಜೊತೆಗೆ ಸಂಗೀತದ ಸಾಮ್ರಾಟರಾದ ಅಂಧ ಅನಾಥರನ್ನು ಬಡ ಮಕ್ಕಳ ಬಾಳಿನ್ನು ಬೇಳಗಿದವರು, ಸಮಾಜಕ್ಕಾಗಿ ತಮ್ಮ ಬದುಕನ್ನು ಮೀಸಲಿಟ್ಟು ಮಹನೀಯರು ಪಂ.ಪುಟ್ಟರಾಜ ಕವಿ ಗವಾಯಿಗಳವರು ಎಂದರು

ಶ್ರೀ ಬಂಡಯ್ಯ ಶಾಸ್ತ್ರೀಗಳು ಸುಂಟನೂರ ಪ್ರಾಸ್ತಾವಿಕವಾಗಿ ಮಾತನಾಡಿ ಆಲಮೇಲ ಶ್ರೀ ಮಠ ಸಂಗೀತ, ಸಾಹಿತ್ಯ, ಕಲೆ ಕಲಾವಿದರನ್ನು ಬೆಳೆಸಿ ಪ್ರೋತ್ಸಾಹಿಸುವುದರ ಜೊತೆಗೆ ಕೃಷಿ ಕ್ಷೇತ್ರದಲ್ಲಿಯೂ ವಿಶಿಷ್ಟ ಛಾಪನ್ನು ಮೂಡಿಸಿದ ಮಠ ಎಂದರು ತಾರಾಪುರ, ತಡವಲಗಾ, ಯಂಕಂಚಿ, ಗುಂಡಕನಾಳ, ಹನುಮಾಪುರ, ಅರ್ಜುನಗಿ, ಕಡಣಿ, ಮುಳವಾಡ, ಅಗರಖೇಡ, ನೀಲೂರ , ಗುಳೇದಗುಡ್ಡ ಶ್ರೀಗಳು ನೇತೃತ್ವ ವಹಿಸಿದ್ದರು.

ಶೀಮತಿ ನಾಗವೇಣಿ ಅಶೋಕ ಮನಗೂಳಿ ಕಾರ್ಯಕ್ರಮ ಉದ್ಘಾಟಿಸಿದರು.

ಶ್ರೀ ರಘುನಂದ ಶಾಸ್ತ್ರೀಗಳು ಅರಳಗುಂಡಗಿ ಮಾತನಾಡಿದರು,ಸಂಗೀತೋತ್ಸವದಲ್ಲಿ

ರೇಣುಕಗವಾಯಿ ಕೆರೂಟಗಿ, ಯಶವಂತ ಬಡಿಗೇರ ಸಿಂದಗಿ, ವೇತಾಳ ಜೋಶಿ, ಅಪ್ಪು ಉಪ್ಪಿನ,ಸಂಗೀತ ಸೇವೆಯನ್ನು ಸಲ್ಲಿಸಿದರು,ರಾಜು ಕಟ್ಟಿಸಂಗಾವಿ, ಸುರೇಶ ಆಳಂದ, ಪೂರ್ವಾಚಾರಿ ಬಡಿಗೇರ ತಬಲಾ ಸಾತಿ ನೀಡಿದರು, ಸವಿತಾ ಹಿರೇಮಠ, ಭಾಗ್ಯ ಬಾವಿಮನಿ, ಶ್ವೇತಾ ಪತ್ತಾರ ಇದ್ದರು.

# ಸಾಧನೆ ಮಾಡುವ ಮನಸ್ಸಿದ್ದರೆ ಅಂಗ ವೈಕಲ್ಯ ಲೆಕ್ಕಕ್ಕೆ ಬರುವುದಿಲ್ಲ; ಬಸವರಾಜ ಉಮರಾಣಿ

**ಬೆಳಗಾವಿ ವಾರ್ತೆ ವಿಜಯಪುರ:** ದೇವರು ನನಗೆ ದೃಷ್ಠಿ ಕೊಟ್ಟಿದ್ದರೆ ಬಹುಶಃ ಇಂತಹ ಸಾಧನೆ ಮಾಡುವ ಧೈರ್ಯ ಮಾಡುತ್ತಿರಲಿಲ್ಲ. ನಮ್ಮಲ್ಲಿರುವ ಸಮಸ್ಯೆಗಳು ನಮ್ಮ ಸಾಧನೆಗೆ ಪೂರಕವಾಗಬೇಕೆ ಹೊರತು ಮಾರಕವಾಗಬಾರದು. ಸಾಧನೆ ಮಾಡುವ ಮನಸಿದ್ದರೆ ಸರ್ವ ಸಿದ್ಧಿಯಾಗುತ್ತದೆ ಎಂದು ಮಾನವ ಕಂಪ್ಯೂಟರ್ ಖ್ಯಾತಿಯ ಬಸವರಾಜ ಉಮರಾಣಿ ಹೇಳಿದರು. ನಗರದ ಎಕ್ಸಲಂಟ್ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಒಂದು ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನುದ್ಧೇಶಿಸಿ ಮಾತನಾಡಿದ ಅವರು, ಗಣಿತ ಎನ್ನುವುದು ಹಲವರಿಗೆ ಕಬ್ಬಿಣದ ಕಡಲೆಯಾದರೆ ಕೆಲವರಿಗೆ ಅದು ಎಲ್ಲದಕ್ಕಿಂತಲೂ ಸಾಮಾನ್ಯವಾದ ವಿಷಯವಾಗಿ ಕಾಣುತ್ತದೆ.

ಅದಕ್ಕೆ ಕಾರಣ ಆ ವಿಷಯದ ಮೇಲಿರುವ ಅಕ್ಕರೆ. ಯಾವುದನ್ನು ನಾವು ಇಷ್ಟಪಟ್ಟು ಮಾಡುತ್ತೇವೆಯೋ ಅದು ಎಂದಿಗೂ ನಮಗೆ ಬೇಸರ ಮೂಡಿಸುವುದಿಲ್ಲ. ಇಷ್ಟಪಡದೇ ಮಾಡಿದಲ್ಲಿ ಯಾವುದು ನಮಗೆ ಸಿದ್ಧಿಸುವುದಿಲ್ಲ. ಉದಾಹರಣೆಗೆ ನಾನೇ ಇದ್ದೇನೆ. ಕಣ್ಣಿದ್ದ ಶಕುಂತಲಾ ದೇವಿ ಮಾನವ ಕಂಪ್ಯೂಟರ್ ಎಂದು ಕರೆಸಿಕೊಳ್ಳುತ್ತಾರೆ ಎಂದರೆ ನಾನೇಕೆ ಕರೆಸಿಕೊಳ್ಳಬಾರದು ಎಂದು ನಿರ್ಧಾರ ಮಾಡಿದ್ದಕ್ಕಾಗಿ ಇಂದು ನಿಮ್ಮೆದುರಿಗೆ ನಿಂತು ಮಾತಾಡುತ್ತಿದ್ದೇನೆ. ಅದಕ್ಕೆ ಹೇಳುತ್ತೇನೆ ಬದುಕಿನಲ್ಲಿ ಯಾವುದನ್ನು ಕೊರತೆ ಎಂದು ತಿಳಿದುಕೊಳ್ಳುತ್ತೇವೆಯೋ ಅದು ಎಂದಿಗೂ ನಮಗೆ ನೆಮ್ಮದಿ ನೀಡುವುದಿಲ್ಲ. ಅದರ ಬದಲಿಗೆ ಕೊರತೆಯನ್ನೇ ಬದುಕಿನ ಒರತೆಯನ್ನಾಗಿ ಮಾಡಿಕೊಂಡು ಹೆಜ್ಜೆ ಹಾಕಿದ್ದೇ




ಆದಲ್ಲಿ ಬಾಳು ಹಸಿರಾಗುತ್ತದೆ. ನಾವಿಲ್ಲಿ ಬಂದಿದ್ದು ಸಾಧನೆ ಮಾಡುವುದಕ್ಕಾಗಿಯೇ ಹೊರತು ಸಂಕಟ ಪಟ್ಟುಕೊಳ್ಳುವುದಕ್ಕಲ್ಲ. ಸವಾಲು ಹಾಕುವ ಜನಗಳ ಎದುರಿಗೆ ಜವಾಬು ನೀಡುತ್ತಲೇ ಬದುಕುವುದನ್ನು ಕಲಿತಾಗ ಮಾತ್ರ ಬದುಕಿನಲ್ಲಿ ಏನಾದರೂ ಮಾಡುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಕುರಿತು ಮಾತನಾಡಿದ ಪ್ರಾಂಶುಪಾಲ ಮಂಜುನಾಥ ಜುನಗೊಂಡ ಅವರು, ಆದರ್ಶವಿಲ್ಲದೆ ಬದುಕಿದರೆ ಬದುಕಿಗೆ ಅವಮಾನ. ಸಾಧನೆ ಇಲ್ಲದೆ ಸತ್ತರೆ ಸಾವಿಗೆ ಅವಮಾನ ಎಂದು ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ಹೇಳಿದ ಮಾತು ಅಕ್ಷರಶಃ ಯುವಜನತೆ ಎದೆಯಲ್ಲಿ ಅಚ್ಚು ಹಾಕಿಸಿಕೊಳ್ಳಬೇಕು. ಕಣ್ಣಿಲ್ಲದ ವ್ಯಕ್ತಿ ಇಷ್ಟೆಲ್ಲ ಮಾಡುವಾಗ ದೇವರು ನಮಗೆ ಎಲ್ಲವನ್ನು ಸರಿಯಾಗಿ ಇಟ್ಟಿದ್ದಾನೆ. ಹೊಸ ಶತಮಾನಕ್ಕೆ ಮುನ್ನುಡಿ ಬರೆಯುವ ಅವಕಾಶ ಕೊಟ್ಟಿದ್ದಾನೆ. ಅದನ್ನು ಸಮರ್ಪಕವಾಗಿ ಬಳಸಿಕೊಂಡು ಅಪ್ಪ ಅಮ್ಮನ ಆಸೆಯನ್ನು ಈಡೇರಿಸುವುದರ ಕಡೆಗೆ ಹೆಜ್ಜೆ ಹಾಕಬೇಕೆ ಹೊರತು ನನ್ನಿಂದ ಏನಾಗುತ್ತದೆ. ನಾನೇನು ಮಾಡಬಲ್ಲೆ ಎಂದುಕೊಂಡು ಅಳುತ್ತ ಕುಳಿತುಕೊಳ್ಳಬಾರುದು. ಎಲ್ಲಿ ನೋವಿದೆಯೋ ಅಲ್ಲಿಯೇ ಗೆಲುವಿದೆ ಎನ್ನುವುದನ್ನು ಎಂದಿಗೂ

ಮರೆಯಬಾರದು ಎಂದು ಹೇಳಿದರು.

ಶೈಕ್ಷಣಿಕ ಸಂಯೋಜಕ ಮಂಜುನಾಥ ತುಮ್ಮರಮಟ್ಟಿ ಸೇರಿದಂತೆ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿ ನಿಲಯದ ಮುಖ್ಯಸ್ಥರು, ನಿಲಯಪಾಲಕರು ಉಪಸ್ಥಿತರಿದ್ದರು. ಆಂಗ್ಲ ಉಪನ್ಯಾಸಕ ಮುಸ್ತಾಕ ಮಲಘಾಣ ಕಾರ್ಯಕ್ರಮವನ್ನು ನಿರೂಪಿಸಿದರು.

## ಪಡಿತರ ಮಾರಿದರೆ : 6 ತಿಂಗಳು ಪಡಿತರ ಚೀಟಿ ಅಮಾನತ್ತು

ಬಾಗಲಕೋಟೆ: ಆಹಾರ ಇಲಾಖೆಯಿಂದ ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿದಾರರಿಗೆ ಸಾರ್ವಜನಿಕ ವಿತರಣಾ ಪದ್ದತಿಯಡಿ ಅರ್ಹ ಫಲಾನುಭವಿಗಳಿಗೆ ಎನ್‌ಎಫ್‌ಎಸ್‌ಎ ಮತ್ತು ಅನ್ನಭಾಗ್ಯ ಯೋಜನೆಯಡಿ ಉಚಿತವಾಗಿ ಪಡಿತರ ವಿತರಿಸಲಾಗುತ್ತಿದೆ. ಯಾವುದೇ ಪಡಿತರ ಚೀಟಿದಾರರು ಅಥವಾ ಪಡಿತರ ಸದಸ್ಯರು ತಮಗೆ ಹಂಚಿಕೆಯಾದ ಆಹಾರಧಾನ್ಯಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಕಂಡುಬಂದಲ್ಲಿ ಅಂತಹವರ ಪಡಿತರ ಚೀಟಿಯನ್ನು ಸರಕಾರದ ಆದೇಶದನ್ವಯ 6 ತಿಂಗಳ ಅವಧಿಗೆ ಅಮಾನತ್ತಿನಲ್ಲಿಟ್ಟು, ಆಹಾರಧಾನ್ಯಕ್ಕೆ ಎದುರಾಗಿ ಮುಕ್ತ ಮಾರುಕಟ್ಟೆ ದರದಂತೆ ದಂಡ ವಿಧಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ರಮವಾಗಿ ಕಳ್ಳಭಟ್ಟಿ ಸಾರಾಯಿಯ ಆರೋಪಿಗಳನ್ನು ದಸ್ತಗಿರಿ ಮಾಡಿ ಪ್ರಕರಣ ದಾಖಲು



**ಬೆಳಗಾವಿ ವಾರ್ತೆ ಧಾರವಾಡ:** ಬೆಳಗಾವಿಯ ಅಬಕಾರಿ ಅಪರ ಆಯುಕ್ತರು, ಅಬಕಾರಿ ಜಂಟಿ ಆಯುಕ್ತರು ಹಾಗೂ ಧಾರವಾಡ ಅಬಕಾರಿ ಉಪ ಆಯುಕ್ತರು ಮತ್ತು ಅಬಕಾರಿ ಅಧೀಕ್ಷಕರು ಉಪ ವಿಭಾಗ ಅವರ ಮಾರ್ಗದರ್ಶನದಲ್ಲಿ ಜೂನ್ 22, 2026 ರಂದು ನವಲಗುಂದ ವಲಯ ವ್ಯಾಪ್ತಿಯ ಅಣ್ಣಿಗೇರಿ ಶರಹದ್ದಿನಲ್ಲಿ ಬರುವ ಕಣಗಲ್ಲ ಹಳ್ಳದಲ್ಲಿ ಅಕ್ರಮವಾಗಿ ಕಳ್ಳಭಟ್ಟಿ ಸಾರಾಯಿಯನ್ನು ತಯಾರಿಸುವಾಗ ಅಬಕಾರಿ ನಿರೀಕ್ಷಕ ರಾಮು ಆರೆನ್ನವರ, ಉಪ ನಿರೀಕ್ಷಕ ಅನುರಾಧ ಓಲೇಕಾರ ಮತ್ತು ವಾಹನ ಚಾಲಕ ಮಲ್ಲಿಕಾರ್ಜುನ ವಾಲೀಕಾರ, ಗೃಹ ರಕ್ಷಕ ಕಲ್ಲಯ್ಯ ಹೊಸಮನಿ ಮತ್ತು ಶರೀಫ್ ಹುಡೇದ ಸಿಬ್ಬಂದಿ ಹಾಗೂ ಪಂಚರುಗಳಾದ ಮಲ್ಲಪ್ಪ ಹನುಮಂತಪ್ಪ ಮುಳಗುಂದ (ಅಣ್ಣಿಗೇರಿ ಪುರಸಭೆಯ ಅಟೆಂಡರ್), ವಿಜಯಕುಮಾರ ಎಸ್ ಕುಂಬಿಮಠ (ಅಣ್ಣಿಗೇರಿಯ ಪುರಸಭೆಯ ದ್ವಿ.ದ.ಸ) ಅವರೊಂದಿಗೆ ಆರೋಪಿಗಳನ್ನು ದಸ್ತಗಿರಿ ಮಾಡಿ ಕರ್ನಾಟಕ ಅಬಕಾರಿ ಕಾಯ್ದೆ 1965 ರಡಿಯಲ್ಲಿ ಗುನ್ನೆ ನಂ–99/2025–26 ರ ಪ್ರಕರಣವನ್ನು ದಾಖಲಿಸಿದೆ.

ಆರೋಪಿ ಶೇಖರ ವಿರೂಪಾಕ್ಷಿ ಹರಣಶಿಕಾರಿ ವಯಾ–26, ಜಾತಿ–ಹರಣಶಿಕಾರಿ, ಉದ್ಯೋಗ–ಕೂಲಿ ಕೆಲಸ, ಸಾ–ಹರಣಶಿಕಾರಿ ಕಾಲೋನಿ ಅಣ್ಣಿಗೇರಿ ತಾ–ಅಣ್ಣಿಗೇರಿ, ಜಿ–ಧಾರವಾಡ. ಸಾಗರ ವಿರೂಪಾಕ್ಷಪ್ಪ ಹರಣಶಿಕಾರಿ ವಯಾ:31, ಜಾತಿ–ಹರಣಶಿಕಾರಿ, ಉದ್ಯೋಗ–ಕೂಲಿ ಕೆಲಸ. ಸಾ–ಹರಣಶಿಕಾರಿ ಕಾಲೋನಿ ಅಣ್ಣಿಗೇರಿ ತಾ–ಅಣ್ಣಿಗೇರಿ, ಜಿ–ಧಾರವಾಡ. ವಾಹನದ ಮಾಲೀಕರನ್ನು ಪತ್ತೆಹಚ್ಚಿ ಬಂಧಿಸಬೇಕಾಗಿದೆ.

ಪ್ರಕರಣದಲ್ಲಿ ಜಪ್ತಾದ ಮುದ್ದೆಮಾಲಿನ ವಿವರ: ಒಂದು ಹಿತ್ತಾಳೆ ಕೊಡದಲ್ಲಿ ಅಂದಾಜು 02 ಲೀ ನಷ್ಟು ಕಳ್ಳಭಟ್ಟಿ ಸರಾಯಿ, ಒಂದು ಪ್ಲಾಸ್ಟಿಕ್ ಬಾಟಲಿನಲ್ಲಿ 01 ಲೀ ನಷ್ಟು ಕಳ್ಳಭಟ್ಟಿ ಸಾರಾಯಿ, 100 ಲೀ ಸಾಮರ್ಥ್ಯದ 14 ನೀಲಿ ಬಣ್ಣದ ಪ್ಲಾಸ್ಟಿಕ್ ಬ್ಯಾರಲ್‌ಗಳಲ್ಲಿ 1300 ಲೀ ನಷ್ಟು ಬೆಲ್ಲದ ರಾಸಾಯನ (ರೂ–2600), 200 ಲೀ ಸಾಮರ್ಥ್ಯದ 02 ನೀಲಿ ಬಣ್ಣದ ಪ್ಲಾಸ್ಟಿಕ ಬ್ಯಾರಲ್ ಗಳಲ್ಲಿ ಒಟ್ಟು–400 ಲೀ ಬೆಲ್ಲದ ರಾಸಾಯನ (ಒಟ್ಟು–1700 ಬೆಲ್ಲದ ರಾಸಾಯನ), ಅಂದಾಜು 30 ಕೆಜಿ ಬೆಲ್ಲ, ಕಪ್ಪು ಬಣ್ಣದ ಎಚ್ ಎಫ್ ಡಿಲೆಕ್ಸ್ ಹಿರೋ ದ್ವಿಚಕ್ರ ವಾಹನ ನೊಂದಣಿ ಸಂ–ಕೆಎ–26 ವಿ–6122 ಚೆಸ್ಸಿ ನಂ–ಒಃಐಊ೦11೦ಐಈ9ಃ33183, ಇಂಜಿನ್ ನಂ–ಊ೦11ಇಎಈ9ಃ41066, ಓಪೋ ಕಂಪನಿಯ 01 ಸ್ಮಾರ್ಟ ಮೊಬೈಲ್ ಪೋನ್, ಇನ್ವೇಕ್ಸ ಕಂಪನಿಯ 01 ಸ್ಮಾರ್ಟ ಮೊಬೈಲ್ ಪೋನ್.

ಆರೋಪಿತರನ್ನು ದಸ್ತಗಿರಿ ಮಾಡಿ ಘನ ನ್ಯಾಯಾಲಯಕ್ಕೆ ಹಾಜರುಪಡಿಸಿ, ಸದರಿ ಆರೋಪಿತರ ವಿರುದ್ಧ ಪ್ರಥಮ ವರ್ತಮಾನ ವರದಿಯನ್ನು ಅಬಕಾರಿ ನಿರೀಕ್ಷಕರಾದ ರಾಮು ಆರೆನ್ನವರ ಅವರು ದಾಖಲಿಸಿ ಮುಂದಿನ ತನಿಖೆಯನ್ನು ಮಾಡಲಾಗುತ್ತಿದೆ ಎಂದು ನವಲಗುಂದ ವಲಯದ ಅಬಕಾರಿ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇಂದ್ರ ಕಾರಾಗೃಹ ಧಾರವಾಡದ ಬಂಧಿಗಳಿಗೆ ವಿಶೇಷ ಕೌಶಲ್ಯ ತರಬೇತಿ



**ಬೆಳಗಾವಿ ವಾರ್ತೆ ಧಾರವಾಡ:** ಕೌಶಲ್ಯಾಭಿವೃದ್ಧಿ ನಿಗಮದಿಂದ ಧಾರವಾಡ ಕೇಂದ್ರ ಕಾರಾಗೃಹ ಬಂಧಿಗಳಿಗೆ ವಿಶೇಷ ಕೌಶಲ್ಯ ತರಬೇತಿ (ಅಸಿಸ್ಟಂಟ್ ಫ್ಯಾಶನ್ ಡಿಸೈನರ್) ಕಾರ್ಯಕ್ರಮವನ್ನು ನಿನ್ನೆ (ಜೂ.24) ಧಾರವಾಡ ಕೇಂದ್ರ ಕಾರಾಗೃಹದಲ್ಲಿ ಬೆಂಗಳೂರಿನ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಕಾಂತಾ ನಾಯಕ್ ಅವರು ಸಸಿಗೆ ನೀರುಣಿಸುವುದರ ಮೂಲಕ ಉದ್ಘಾಟಿಸಿ, ಮಾತನಾಡಿದರು.

ಕೌಶಲ್ಯ ಅಭಿವೃದ್ಧಿ ನಿಗಮದಿಂದ ಹಲವಾರು ವಿಶೇಷ ತರಬೇತಿ ಕಾರ್ಯಕ್ರಮಗಳಿದ್ದು, ಕಾರಾಗೃಹದ ಬಂದಿಗಳಿಗೆ ಬೇಡಿಕೆ ಇರುವ ಕೌಶಲ್ಯ ತರಬೇತಿಯು ವ್ಯಕ್ತಿಯ ಜೀವನದಲ್ಲಿ ಮಹತ್ವದ ಪರಿವರ್ತನೆ ಶಕ್ತಿಯನ್ನು ಕಾರಾಗೃಹದಲ್ಲಿರುವ ಬಂದಿಗಳಿಗೆ ಉದ್ಯೋಗೋನ್ಮುಖ ಕೌಶಲ್ಯಗಳನ್ನು ಕಲಿಸುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ಬೆಳೆಸಿ ಸಮಾಜದಲ್ಲಿ ಮುಖ್ಯವಾಹಿನಿಗೆ ಮರಳಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಮಾತನಾಡಿ, ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳ ಕಾರಾಗೃಹದ ಬಂದಿಗಳಿಗೆ ಬದುಕು ಕಟ್ಟಿಕೊಳ್ಳಲು ಅಗತ್ಯವಾದ ಕೌಶಲ್ಯಗಳನ್ನು ಒದಗಿಸುತ್ತವೆ ಮತ್ತು ಬಂದಿಗಳು ಫ್ಯಾಶನ್ ಡಿಸೈನಿಂಗ್ ಮತ್ತು ಆಹಾರ ಸಂಸ್ಕರಣಾ ಕ್ಷೇತ್ರದಲ್ಲಿ ತರಬೇತಿಯನ್ನು ಪಡೆದುಕೊಂಡರೆ ಸ್ವಯಂ ಉದ್ಯೋಗ ಕೈಗೊಂಡು ಸಮಾಜದಲ್ಲಿ ಉತ್ತಮ ರೀತಿಯಲ್ಲಿ ಸ್ವಾವಲಂಬಿ ಜೀವನ ಕಟ್ಟಿಕೊಳ್ಳಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಕೇಂದ್ರ ಕಾರಾಗೃಹದ ಸಹಾಯಕ ಅಧೀಕ್ಷಕಿ ನಿರ್ಮಲಾ ಬಿ.ಆರ್. ಅವರು ಮಾತನಾಡಿ, ಸರ್ಕಾರದ ವಿವಿಧ ಇಲಾಖೆಗಳಿಂದ ಬಂದಿಗಳ ಬೇಡಿಕೆಯಂತೆ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ನೀಡುತ್ತಲಿದ್ದು, ಬಂದಿಗಳು ಕೌಶಲ್ಯ ತರಬೇತಿಯ ಕಾರ್ಯಕ್ರಮವನ್ನು ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಶ್ರೀ ರೇಣುಕಾ ವೆಲಫೇರ ಎಜ್ಯುಕೇಶನ ಸೊಸೈಟಿಯ ಅಧ್ಯಕ್ಷರು ಮಾತನಾಡಿ, ಫ್ಯಾಶನ್ ಡಿಸೈನಿಂಗ್ ಕ್ಷೇತ್ರದಲ್ಲಿ ಅಗತ್ಯವಿರುವ ತಾಂತ್ರಿಕ ಜ್ಞಾನ ಹೊಲಿಗೆ ಕೌಶಲ್ಯ ಹಾಗೂ ಉದ್ಯೋಗಾವಕಾಶಗಳಿಗೆ ಸಂಬಂಧಿಸಿದ ತರಬೇತಿಯನ್ನು ನೀಡಲಾಗುವದು ಮತ್ತು ತರಬೇತಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರವನ್ನು ನೀಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಸಿ.ಎಂ.ಚನಬಸನಗೌಡರ ಹಾಗೂ ಕರಕುಶಲ ಜವಳಿ ಮಂತ್ರಾಲಯದ ಸಹಾಯಕ ನಿರ್ದೇಶಕ ಕಿರಣ ವಿ.ಎನ್ ಮತ್ತು ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ಗಂಗಪ್ಪ ಹಣಬರ ಹಾಗೂ ಕಾರಾಗೃಹದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು, ಕಾರಾಗೃಹದ ಬಂದಿಗಳು ಉಪಸ್ಥಿತರಿದ್ದರು.

## ಧಾರವಾಡ ಜಿಲ್ಲಾ ಪೊಲೀಸರಿಂದ ಜಪ್ತ ಮಾಡಲಾದ 03 ಪ್ರಕರಣದಲ್ಲಿನ 49 ಕೆ.ಜಿ 950 ಗ್ರಾಂ. ಗಾಂಜಾ ನಾಶ



**ಬೆಳಗಾವಿ ವಾರ್ತೆ ಧಾರವಾಡ :** ಅಂತರರಾಷ್ಟ್ರೀಯ ಮಾದಕ ದ್ರವ್ಯ ದಿನಾಚರಣೆ ಪ್ರಯುಕ್ತ ಪ್ರಧಾನ ಕಛೇರಿ ಬೆಂಗಳೂರು ಅವರ ನಿರ್ದೇಶನದಂತೆ ಧಾರವಾಡ ಜಿಲ್ಲೆಯಲ್ಲಿ ಎನ್.ಡಿ.ಪಿ. ಎಸ್ ಕಾಯ್ದೆ ಅಡಿಯಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಜಪ್ತ ಮಾಡಲಾಗಿರುವ ಮಾದಕ ವಸ್ತುಗಳನ್ನು ನಾಶಪಡಿಸುವ ಸಲುವಾಗಿ ಧಾರವಾಡ ಜಿಲ್ಲಾ ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ " Drug Disposal " ಸಮಿತಿಯ ಅಧಿಕಾರಿಗಳು ಜೂನ್ 17, 2026 ರಂದು ಸಭೆ ನಡೆಸಿ ಚರ್ಚಿಸಿ ತೀರ್ಮಾನಿಸಿದರು. ಅದರಂತೆ ಧಾರವಾಡ ಜಿಲ್ಲೆಯ ಎಲ್ಲ ಪೊಲೀಸ್ ಠಾಣೆಗಳಲ್ಲಿ 2025 ಮತ್ತು 2026 ನೇ ಸಾಲಿನಲ್ಲಿ ಎನ್.ಡಿ.ಪಿ.ಎಸ್ ಕಾಯ್ದೆ ಅಡಿಯಲ್ಲಿ ದಾಖಲಾಗಿರುವ ಪ್ರಕರಣಗಳ ಪೈಕಿ 03 ಪ್ರಕರಣಗಳಲ್ಲಿ ಜಪ್ತ ಮಾಡಲಾಗಿರುವ ಗಾಂಜಾ (ಮಾದರಿ ತೆಗೆದಿರಿಸಿದ ಗಾಂಜಾ ಹೊರತುಪಡಿಸಿ) ಒಟ್ಟು ತೂಕ 49 ಕೆಜಿ 950 ಗ್ರಾಂ, ಮಾದಕ ವಸ್ತುವನ್ನು ಧಾರವಾಡ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಗುಂಜನ್ ಆರ್ಯ, ಧಾರವಾಡ ಗ್ರಾಮೀಣ ಉಪ–ವಿಭಾಗ ಡಿ.ಎಸ್.ಪಿ ವಿನೋಧ ಮುಕ್ತೆದಾರ, ನವಲಗುಂದ ವೃತ್ತದ ಸಿ.ಪಿ.ಐ ರವಿ ಕಪ್ಪತ್ತನವರ ಅವರನ್ನೊಳಗೊಂಡ "Drug Disposal committee" ಅವರ ಸಮಕ್ಷಮ ಮುಖ್ಯಾದಿಕಾರಿಗಳು ಕರ್ನಾಟಕ ರಾಜ್ಯ ವಾಯು ಮಾಲಿನ್ಯ ನಿಯಂತ್ರಣ ಮಂಡಳಿ ಅವರ ಸಮ್ಮುಖದಲ್ಲಿ M/s Rio Green India Ltd(CBMWTF) Plot No:126/L Tarihal Industrial area Tq: Hubballi ರವರಲ್ಲಿ ಸುಟ್ಟು ನಾಶ ಪಡಿಸಲಾಯಿತು ಎಂದು ಜಿಲ್ಲಾ ಪೊಲೀಸ್ ಅಧೀಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೆ ಪೋಲಿಯೊ ಲಸಿಕೆ ಹಾಕಿಸಿ



**ಬೆಳಗಾವಿ ವಾರ್ತೆ ಗದಗ:** ಪೋಲಿಯೊ ಮುಕ್ತ ಭಾರತ ನಿರ್ಮಾಣದ ಸಂಕಲ್ಪವನ್ನು ಯಶಸ್ವಿಗೊಳಿಸಲು ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೆ ಪೋಲಿಯೊ ಲಸಿಕೆ ಹಾಕಿಸುವಂತೆ ವಿಧಾನ ಪರಿಷತ್ ಶಾಸಕ ಪ್ರೊ. ಎಸ್.ವಿ. ಸಂಕನೂರ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಗದಗ ನಗರದ ಎಂಸಿಎಚ್ ಆಸ್ಪತ್ರೆಯಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನಕ್ಕೆ ಮಗುವಿಗೆ ಪೋಲಿಯೊ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಪೋಲಿಯೊ ಎಂಬುದು ಮಕ್ಕಳಲ್ಲಿ ಶಾಶ್ವತ ಅಂಗವೈಕಲ್ಯ ಉಂಟುಮಾಡುವ ಗಂಭೀರ ವೈರಾಣುಜನ್ಯ ಕಾಯಿಲೆಯಾಗಿದ್ದು, ಅದರ ವಿರುದ್ಧದ ಅತ್ಯಂತ ಪರಿಣಾಮಕಾರಿ ರಕ್ಷಣೆಯೇ ಪೋಲಿಯೊ ಲಸಿಕೆ ಎಂದು ತಿಳಿಸಿದರು.

ದೇಶದಲ್ಲಿ ಪೋಲಿಯೊ ನಿರ್ಮೂಲನೆ ಸಾಧನೆಯಾಗಿದ್ದರೂ, ಈ ಸಾಧನೆಯನ್ನು ಶಾಶ್ವತವಾಗಿ ಉಳಿಸಿಕೊಳ್ಳಲು ಪ್ರತಿಯೊಂದು ಲಸಿಕಾ ಸುತ್ತಿನಲ್ಲೂ ಯಾವುದೇ ಮಗು ವಂಚಿತವಾಗದಂತೆ ನೋಡಿಕೊಳ್ಳುವುದು ಅತ್ಯಗತ್ಯವಾಗಿದೆ ಎಂದರು.

ಸರ್ಕಾರವು ಮಕ್ಕಳ ಆರೋಗ್ಯ ರಕ್ಷಣೆಗಾಗಿ ಉಚಿತವಾಗಿ ಪೋಲಿಯೊ ಲಸಿಕೆಯನ್ನು ನೀಡುತ್ತಿದೆ. ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ಲಸಿಕೆ ಹಾಕಿಸುವುದು ಪ್ರತಿಯೊಬ್ಬ ಪೋಷಕರ ಜವಾಬ್ದಾರಿಯಾಗಿದೆ. ಲಸಿಕೆಯಿಂದ ಯಾವುದೇ ಅಡ್ಡಪರಿಣಾಮಗಳ ಬಗ್ಗೆ ಆತಂಕ ಪಡುವ ಅಗತ್ಯವಿಲ್ಲ. ಆರೋಗ್ಯ ಇಲಾಖೆಯ ಸಿಬ್ಬಂದಿ ಮನೆ–ಮನೆಗೆ ತೆರಳಿ ಹಾಗೂ ವಿವಿಧ ಕೇಂದ್ರಗಳಲ್ಲಿ ಲಸಿಕೆ ನೀಡಲಿದ್ದು, ಪೋಷಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಪೋಲಿಯೊ ನಿರ್ಮೂಲನೆಗೆ ಆರೋಗ್ಯ ಇಲಾಖೆ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ವೈದ್ಯಕೀಯ ಸಿಬ್ಬಂದಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಸಾರ್ವಜನಿಕರು ಸಹ ಇಲಾಖೆಯೊಂದಿಗೆ ಕೈಜೋಡಿಸಿ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಶಾಸಕ ಎಸ್ ವಿ ಸಂಕನೂರ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲೆಯಾದ್ಯಂತ ಸರ್ಕಾರಿ ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಅಂಗನವಾಡಿ ಕೇಂದ್ರಗಳು ಸೇರಿದಂತೆ ವಿವಿಧ ಲಸಿಕಾ ಕೇಂದ್ರಗಳಲ್ಲಿ ಪೋಲಿಯೊ ಲಸಿಕೆ ನೀಡುವ ವ್ಯವಸ್ಥೆ ಮಾಡಲಾಗಿದೆ. ಲಸಿಕೆ ಪಡೆಯದೆ ಉಳಿದ ಮಕ್ಕಳಿಗೆ ಮುಂದಿನ ದಿನಗಳಲ್ಲಿ ಮನೆ–ಮನೆಗೆ ಭೇಟಿ ನೀಡಿ ಲಸಿಕೆ ನೀಡುವ ಕಾರ್ಯವೂ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರೆಗೌಡ್ರ, ಜಿಲ್ಲಾ ನೋಡಲ್ ಅಧಿಕಾರಿ ಡಾ. ಶಿವಕುಮಾರ ಮಾನಕರ, ವೈದ್ಯಾಧಿಕಾರಿಗಳು, ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ವೀರೇಶ್ವರ ಪುಣ್ಯಾಶ್ರಮದಲ್ಲಿ ಶೀತಲ ಸಮರ: ಟ್ರಸ್ಟಿಗಳಿಂದ ಜೀವ ಬೆದರಿಕೆ



**ಬೆಳಗಾವಿ ವಾರ್ತೆ ಗದಗ:** ನಾಡಿನ ಸಹಸ್ರಾರು ಅಂಧರಿಗೆ ಸಂಗೀತ ಶಿಕ್ಷಣ ನೀಡುವ ಮೂಲಕ ಅಂಧರ ಬಾಳಿಗೆ ಬೆಳಕು ನೀಡಿರುವ ವೀರೇಶ್ವರ ಪುಣ್ಯಾಶ್ರಮದ ಟ್ರಸ್ಟ್‌ನಲ್ಲಿ ಶೀತಲ ಸಮರ ಪ್ರಾರಂಭವಾಗಿದ್ದು, ಉಭಯ ಗಾನ ವಿಷಾರದ ಲಿಂ. ಪಂಡಿತ ಡಾ. ಪುಟ್ಟರಾಜ ಕವಿ ಗವಾಯಿಗಳ ಉತ್ತರಾಧಿಕಾರಿಯಾಗಿ ಪೀಠಾಧಿಕಾರಿಯಾಗಿರುವ ಕಲ್ಲಯ್ಯಜ್ಜನವರಿಗೆ ಟ್ರಸ್ಟಿಗಳು ಜೀವ ಬೆದರಿಕೆ, ಮಾನಸಿಕ ಕಿರುಕುಳ ನೀಡುತ್ತಿದ್ದಾರೆ ಎಂದು ಕಲ್ಲಯ್ಯಜ್ಜನವರು ಗಂಭೀರ ಆರೋಪ ಮಾಡಿದ್ದಾರೆ.

ಗದುಗಿನ ವೀರೇಶ್ವರ ಪುಣ್ಯಾಶ್ರಮದಲ್ಲಿ ತುರ್ತು ಸುದ್ದಿಗೋಷ್ಠಿಯಲ್ಲಿ ಸುದ್ದಿಗಾರರ ಮುಂದೆ ಕಣ್ಣಿನಲ್ಲಿ ನೀರು ತುಂಬಿಕೊಂಡು ಜೀವಬೆದರಿಕೆ, ಮಾನಸಿಕ ಕಿರುಕುಳದ ಬಗ್ಗೆ ವಿವರಿಸಿದ ಕಲ್ಲಯ್ಯಜ್ಜನವರು, ತಾವು ಪೀಠಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ನಂತರ ವೀರೇಶ್ವರ ಪುಣ್ಯಾಶ್ರಮದಲ್ಲಿ, ನಾಡಿನ ವಿವಿಧ ಪ್ರದೇಶಗಳಲ್ಲಿ ನಡೆದ ತುಲಾಭಾರದಲ್ಲಿ ದೊರೆತಿರುವ ಹಣ, ಇತರೆ ಕಾಣಿಕೆ ಆಯಾ ಪ್ರದೇಶದಲ್ಲಿನ ಮಠಗಳ ಅಭಿವೃದ್ಧಿಗೆ, ವೀರೇಶ್ವರ ಪುಣ್ಯಾಶ್ರಮದ ಅಭಿವೃದ್ಧಿಗೆ ವಿನಿಯೋಗಿಸಿದ್ದೇವೆ. ಟ್ರಸ್ಟಿಗಳು ಆರೋಪಿಸಿದಂತೆ ತಾವು ತಮ್ಮ ವೈಯಕ್ತಿಕ ಹೆಸರಿನಲ್ಲಿ ದೇಶದ ಯಾವುದೇ ಸ್ಥಳದಲ್ಲಿಯೂ ಆಸ್ತಿಗಳನ್ನು ಖರೀದಿಸಿಲ್ಲ. ಒಂದೇ ಒಂದು ನಯಾಪೈಸೆ ದುರುಪಯೋಗಪಡಿಸಿಕೊಂಡಿಲ್ಲ ಎಂದು ಹೇಳಿದರು.

ವೀರೇಶ್ವರ ಪುಣ್ಯಾಶ್ರಮದ ಟ್ರಸ್ಟಿಗಳು ಸುಖಾಸುಮ್ಮನೆ ತಮ್ಮ ಮೇಲೆ ಅಧಿಕಾರ ದುರುಪಯೋಗದ ಆರೋಪ ಮಾಡುತ್ತಿದ್ದಾರೆ. ತಮಗೆ ಟ್ರಸ್ಟಿಗಳಿಂದ ಮಾನಸಿಕ ಕಿರುಕುಳ, ಜೀವ ಬೆದರಿಕೆ ಇದೆ. ಇದನ್ನು ಕಳೆದ ನಾಲ್ಕು ವರ್ಷಗಳಿಂದ ಹೃದಯದಲ್ಲಿಯೇ ಅದುಮಿಟ್ಟು ಕೊಂಡಿದ್ದೇನೆ. ಇದೀಗ ನನಗೆ ಮಾನಸಿಕ ಕಿರುಕುಳ, ಜೀವಬೆದರಿಕೆ ಅದುಮಿಟ್ಟುಕೊಳ್ಳಲು ಆಗದ್ದಕ್ಕೆ ಪತ್ರಿಕಾಗೋಷ್ಠಿ ಕರೆದು ಸುದ್ದಿಗಾರರಿಗೆ ವಿವರಿಸಿದ್ದೇನೆ ಎಂದರು.

ವೀರೇಶ್ವರ ಪುಣ್ಯಾಶ್ರಮದ ಆರು ಜನ ಟ್ರಸ್ಟಿಗಳ ವಿರುದ್ಧ ಗುರುವಾರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲು ಉದ್ದೇಶಿಸಿದ್ದಾಗಿ ವಿವರಿಸಿದರು. ವೀರೇಶ್ವರ ಪುಣ್ಯಾಶ್ರಮದ ತೇರಿನ ಗಾಲಿಗಳನ್ನು ಮಠದ ಭಕ್ತೆಯಾಗಿರುವ ಜೋಹರಾ ಪೀರಸಾಬ ಕೌತಾಳ ಎಂಬುವವರು ತಮ್ಮ ಸ್ವಂತ ವೆಚ್ಚದಲ್ಲಿ ಮಾಡಿಸಿ ದೇಣಿಗೆಯಾಗಿ ನೀಡಿದ್ದಾರೆ. ಗಾಲಿಗಳ ಮೇಲೆ ದಾನಿಗಳು ತಮ್ಮ ಹೆಸರು ಕೆತ್ತಿಸಿದ್ದಾರೆ. ಇದರಲ್ಲಿ ಯಾವದೇ ತಪ್ಪಿಲ್ಲ. ವೀರೇಶ್ವರ ಪುಣ್ಯಾಶ್ರಮಕ್ಕೆ ಯಾವುದೇ ದಾನಿ ಹೆಸರು ಹಾಕುವಂತೆ ಸೂಚಿಸಿ ದಾನ ನೀಡಿದರೂ ಸ್ವೀಕರಿಸುತ್ತೇವೆ. ಹೆಸರು ಹಾಕದಂತೆ ಗುಪ್ತದಾನ ನೀಡಿದವರಿಂದಲೂ ದಾನ ಸ್ವೀಕರಿಸಲಾಗುತ್ತಿದೆ ಎಂದು ವಿವರಿಸಿದರು.

## ಆಲಮಟ್ಟಿ ಎತ್ತರ ಕುರಿತು ಆಂಧ್ರ, ತೆಲಂಗಾಣ ಸಿಎಂಗಳೊಂದಿಗೆ ಚರ್ಚೆ ಯಾಕೆ ಮಾಡಲಿಲ್ಲ?

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ತುಂಗಭದ್ರ ಜಲಾಶಯದ ಕ್ರಸ್ಟ್ ಗೇಟ್ ಅನಾವರಣ ಕಾರ್ಯಕ್ರಮಕ್ಕೆ ಆಗಮಿಸಿದ್ದ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಳದ ಕುರಿತು ಚರ್ಚೆ ನಡೆಸಬೇಕಿತ್ತು. ಆದರೆ, ಈ ಮಹತ್ವದ ವಿಚಾರವನ್ನು ಪ್ರಸ್ತಾಪಿಸದೇ ಇರುವುದೇಕೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಪ್ರಶ್ನಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಳವನ್ನು ವಿರೋಧಿಸಿ ನೆರೆಯ ರಾಜ್ಯಗಳು ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದು, ಆ ಪ್ರಕರಣವನ್ನು ಹಿಂತೆಗೆದುಕೊಳ್ಳುವಂತೆ ಮನವೊಲಿಸುವ ಪ್ರಯತ್ನವನ್ನು ಮುಖ್ಯಮಂತ್ರಿ ಮಾಡಬೇಕಾಗಿತ್ತು ಎಂದು ಹೇಳಿದರು.

"ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಳದಿಂದ ಕರ್ನಾಟಕ ಮಾತ್ರವಲ್ಲದೆ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ರೈತರೂ ಸಹ ಪ್ರಯೋಜನ ಪಡೆಯಲಿದ್ದಾರೆ. ಈ ಕುರಿತು ಸಂಬಂಧಪಟ್ಟ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡುವ ಪ್ರಯತ್ನವನ್ನು ಸಿಎಂ ಮಾಡಬೇಕಾಗಿತ್ತು. ಆದರೆ, ಅಂತಹ ಯಾವುದೇ ಪ್ರಯತ್ನ ನಡೆದಿಲ್ಲ," ಎಂದು ಬೊಮ್ಮಾಯಿ ಆರೋಪಿಸಿದರು.

ಇದೇ ವೇಳೆ ಬಿಡದಿ ಟೌನ್‌ಶಿಪ್ ಯೋಜನೆ ಕುರಿತು ಪ್ರತಿಕ್ರಿಯಿಸಿದ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಈ ವಿಷಯದಲ್ಲಿ ಪ್ರತಿಷ್ಠೆ ಬಿಟ್ಟು ಜನಹಿತದ ದೃಷ್ಟಿಯಿಂದ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.



"ಬಿಡದಿಯಲ್ಲಿ ಟೌನ್‌ಶಿಪ್ ನಿರ್ಮಾಣಕ್ಕಾಗಿ ಸರ್ಕಾರ ಪ್ರತಿಷ್ಠೆಯ ಪ್ರಶ್ನೆಯಾಗಿ ತೆಗೆದುಕೊಳ್ಳುವುದು ಸರಿಯಲ್ಲ. ಸರ್ಕಾರಿ ಜಮೀನು ಲಭ್ಯವಿರುವ ಪ್ರದೇಶದಲ್ಲಿ ಟೌನ್‌ಶಿಪ್ ನಿರ್ಮಾಣ ಮಾಡಲಿ. ಎಕರೆಗೆ ?2 ಕೋಟಿ ಪರಿಹಾರ ನೀಡಿ ಭೂಸ್ವಾಧೀನ ಮಾಡುವುದು ಸಮಂಜಸವಲ್ಲ," ಎಂದು ಹೇಳಿದರು.

ಅದೇ ಪ್ರಮಾಣದ ಪರಿಹಾರವನ್ನು ಆಲಮಟ್ಟಿ ಯೋಜನೆಗೆ ಭೂಮಿ ನೀಡಿರುವ ಹಾಗೂ ನೀಡುತ್ತಿರುವ ರೈತರಿಗೆ ಸಹ ನೀಡಬೇಕು ಎಂದು ಆಗ್ರಹಿಸಿದ ಬೊಮ್ಮಾಯಿ, ಬಿಡದಿ ಟೌನ್‌ಶಿಪ್ ಯೋಜನೆಯಲ್ಲಿ ಜನಹಿತಕ್ಕಿಂತ ರಾಜಕೀಯ ಹಿತಾಸಕ್ತಿಯೇ ಹೆಚ್ಚಾಗಿದೆ ಎಂದು ವಾಗ್ದಾಳಿ ನಡೆಸಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001